PRGI NO : KNKAN/26/A0884

ಈ ನಮ್ಮ

# ಧೃತಿ ನ್ಯೂಸ್

E NAMMA DHURTHI NEWS KANNADA DAILY NEWS PAPER

- ಕೊಪ್ಪಳ
- ವಿಜಯನಗರ
- ರಾಯಚೂರು
- ಬಳ್ಳಾರಿ
- ಗದಗ
- ಬಾಗಲಕೋಟೆ
- ಹಾವೇರಿ
- ಧಾರವಾಡ

ಸದೃಢತೆಯ ಹೆಜ್ಜೆಯೊಂದಿಗೆ..., ಕನ್ನಡ ದಿನಪತ್ರಿಕೆ

ಸಂಪಾದಕರು: ಚಂದ್ರಕಾಂತ | ಸಂಪುಟ: 01 ಸಂಚಿಕೆ: 185 ಪುಟಗಳು: 04 ಬೆಲೆ: 02 ದಿನಾಂಕ :08-09-2026 ಮಂಗಳವಾರ | email: enammadhruthinews@gmail.com | Pho : 7353595904

## ಕರಾಟೆ ಬೆಲ್ಟ್ ಪರೀಕ್ಷೆ ಮತ್ತು ಪ್ರಮಾಣ ಪತ್ರ ವಿತರಣಾ ಸಮಾರಂಭ




ಧೃತಿ ನ್ಯೂಸ್ ಸುದ್ದಿ

ಕೊಪ್ಪಳ: ಕರಾಟೆ ಕಲಿಕೆ ಇಂದಿನ ದಿನಮಾನಗಳಲ್ಲಿ ಬಹಳ ಮುಖ್ಯ ಕರಾಟೆ ಕಲಿಕೆಯಿಂದ ಮಕ್ಕಳಿಗೆ ದೈಹಿಕ ಮತ್ತು ಬೌದ್ಧಿಕ ಬೆಳವಣಿಗೆಗೆ ತುಂಬಾ ಸಹಾಯಕವಾಗಿದೆ.

ಕರಾಟೆ ಮಾಡುವ ಮಕ್ಕಳನ್ನು ನೋಡಿದಾಗ ನಮಗೂ ಕರಾಟೆ ಮಾಡಬೇಕೆಂದು ಅನಿಸುತ್ತದೆ. ವಿನಯ ಕುಮಾರ ಪ್ರಾಂಶುಪಾಲರು ಅಲ್ಪ ಸಂಖ್ಯಾತರ ಪಿಯು ಕಾಲೇಜು ಹಿರೇಸಿಂಧೋಗಿ ಇವರು ಕೊಪ್ಪಳದ ವಾರಿರ್ಸ್ ಕರಾಟೆ ಕ್ಲಬ್ ನವರು ಮಾಸ್ತಿ ಪಬ್ಲಿಕ್ ಸ್ಕೂಲ್ ಆವರಣದಲ್ಲಿ ಆಯೋಜಿಸಿದ ಕರಾಟೆ ಬೆಲ್ಟ್ ಪರೀಕ್ಷೆ ಮತ್ತು ಪ್ರಮಾಣ ಪತ್ರ ವಿತರಣಾ ಸಮಾರಂಭದಲ್ಲಿ ಮಾತನಾಡಿದರು. ಬೆಲ್ಟ್ ಪರೀಕ್ಷೆಯಲ್ಲಿ 38 ವಿದ್ಯಾರ್ಥಿಗಳು ಭಾಗವಹಿಸಿ ಪರೀಕ್ಷೆಯಲ್ಲಿ ತೇರ್ಗಡೆಯಾದರು. ಪರೀಕ್ಷಕರಾಗಿ ಡಿ,ಬಾಷಾ ಸಾಹೇಬ್ ಅಧ್ಯಕ್ಷರು ಎನ್ಎಸ್‌ಕೆಎಐ ಕರ್ನಾಟಕ ಮತ್ತು ರಾಜಬಕ್ಷಿ ಎಚ್, ವಿ. ಮುಖ್ಯ ಪರೀಕ್ಷಕರು ಎನ್ಎಸ್‌ಕೆಎ ರವರು ನಡೆಸಿಕೊಟ್ಟರು. ಈ ಸಮಾರಂಭದಲ್ಲಿ ಮಹಾವೀರ ಶಿರಸ್ಥದಾರರು ಕೊಪ್ಪಳ ಮತ್ತು ಹುಲುಗಪ್ಪ ಕಟ್ಟಿಮನಿ ಅಧ್ಯಕ್ಷರು ಮಾಸ್ತಿ ಪಬ್ಲಿಕ್ ಸ್ಕೂಲ್, ಹೇಮಂತ ಕಾರ್ಮಿಕ ಇಲಾಖೆ ಮತ್ತು ಕುರಿ ಜೆಇ ಜೆಸ್ಕಾಂ, ತರಬೇತುದಾರರುಗಳಾದ ದೇವಪ್ಪ, ತಿರುಮಲೇಶ ಮತ್ತು ರೇಣುಕಾ ಕಲ್ಲನವರ, ರಾಕೇಶ ಕುಂಬಾರ ಮತ್ತು ಚಾಂದಪಾಷಾ ಉಪಸ್ಥಿತರಿದ್ದರು.

## ಪ್ರತಿಯೊಬ್ಬರೂ ಜಾಗೃತರಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕು : ಫಾ ಶಾಂತರಾಜ್




ಧೃತಿ ನ್ಯೂಸ್ ಸುದ್ದಿ

ಪೋತ್ನಾಳ: ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ ಪ್ರತಿಯೊಬ್ಬರೂ ಜಾಗೃತರಾಗಿ ಪರಿಸರ ರಕ್ಷಣೆಗೆ ಮುಂದಾಗಬೇಕು ಸಂಸ್ಥೆಯ ಫೀಲ್ಡ್ ಆಫೀಸರ್ ಫಾದರ್ ಶಾಂತರಾಜ್ ನುಡಿದರು


ಸಮೀಪದ ನಾಗರೆಡ್ಡಿಕ್ಯಾಂಪ್ ನಲ್ಲಿ ಲೋಯೋಲ ಸಮಾಜ ಸೇವಾ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಂತರ ಮಾತನಾಡಿದ ಅವರು ನಮ್ಮ ಸುತ್ತ ಮುತ್ತಲಿನ ವಾತಾವರಣವೇ ನಮ್ಮ ಪರಿಸರ ಇದು ನಮ್ಮ ಆರೋಗ್ಯ ಮತ್ತು ಬದುಕಿನ ಮೇಲೆ ನೇರ ಪರಿಣಾಮ ಬೀರುತ್ತದೆ ಪ್ರಸ್ತುತ ದಿನಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯ ಮತ್ತು ಪ್ರಾಕೃತಿಕ ಸಂಪನ್ಮೂಲಗಳ ನಾಶದಿಂದ ಭೂಮಿಯನ್ನು ಉಳಿಸುವುದು ಅನಿವಾರ್ಯವಾಗಿದೆ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಮರಗಳನ್ನು ಬೆಳೆಸುವುದರಿಂದ ಉತ್ತಮ ಆಮ್ಲಜನಕ ದೊರೆಯುತ್ತದೆ ಮತ್ತು ಮಳೆ ಹೆಚ್ಚಾಗುತ್ತದೆ ಹೀಗಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ಮುಂದಿನ ಪೀಳಿಗೆಗಾಗಿ ಉಳಿಸಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಲೊಯೋಲ ಸಮಾಜ ಸೇವಾ ಸಂಸ್ಥೆಯ ಸಿಬ್ಬಂದಿಗಳಾದ ಬಸವರಾಜ್ ಹರವಿ ಮರಿಯಪ್ಪ ಜಾಗೀರಪನ್ನೂರು ದೇವರಾಜ್ ಚಿಕ್ಕಕೊಟ್ನೇಕಲ್ ರವೀಂದ್ರ ಜಾನೇಕಲ್ ಉಪಸ್ಥಿತರಿದ್ದರು ಊರಿನ ಮುಖಂಡರು ಸಂಘದ ಮಹಿಳೆಯರು ಭಾಗವಹಿಸಿದ್ದರು.

## ಮಹಿಳಾ ರಥೋತ್ಸವಕ್ಕೆ ಸ್ವಾಗತ : ಮಹಾದೇವ ಶ್ರೀ

ಧೃತಿ ನ್ಯೂಸ್ ಸುದ್ದಿ

ಕುಕನೂರ: ಮುಂಡರಗಿ ಶ್ರೀ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನಮಠದ ಕುಕನೂರು ಶಾಖಾಮಠದ ವತಿಯಿಂದ ಶ್ರೀ ಜಗದ್ಗುರು ಅನ್ನದಾನೀಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಸೆಪ್ಟೆಂಬರ್ 8ರಂದು ಸಂಜೆ 5 ಗಂಟೆಗೆ ಮಹಿಳಾ ರಥೋತ್ಸವ ಭಕ್ತಿಭಾವದಿಂದ ನಡೆಯಲಿದೆ.



ಈ ಬಾರಿಯ ಮಹಿಳಾ ರಥ-ೋತ್ಸವವು ಹಲವು ವಿಶೇಷ ಧಾರ್ಮಿಕ ಹಾಗೂ ಸಾಂಸ್ಕೃತಿ-ಕ ಕಾರ್ಯಕ್ರಮಗಳೊಂದಿಗೆ ನಡೆಯಲಿದ್ದು, ಮಹಿಳೆಯ-ರಿಗೆ ಉಡಿತುಂಬುವ ಕಾರ್ಯಕ್ರಮ, ಬಳೆಯಿಡಿಸುವ ಕಾರ್ಯಕ್ರಮ ಹಾಗೂ ಬಾಗಿನ ನೀಡುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮಹಿಳೆಯರ ಸೌಭಾಗ್ಯ, ಸಮೃದ್ಧಿ ಮತ್ತು ಕುಟುಂಬದ ಮಂಗಳಕ್ಕಾಗಿ ನಡೆಯುವ ಈ ಸಂಪ್ರದಾಯಬದ್ಧ ಕಾರ್ಯಕ್ರಮಗಳು ವಿಶೇಷ ಆಕರ್ಷಣೆಯಾಗಲಿವೆ. ಇದರ ಜೊತೆಗೆ ಮಹಿಳಾ ಕುಂಭೋತ್ಸವವೂ ನಡೆಯಲಿದ್ದು, ಮಹಿಳೆಯರು ಸಾಂಪ್ರದಾಯಿಕ ಉಡುಗೆಯಲ್ಲಿ ತಲೆಯ ಮೇಲೆ ಪೂರ್ಣಕುಂಭ ಹೊತ್ತು ಭಕ್ತಿಭಾವದಿಂದ ಪಾಲ್ಗೊಳ್ಳಲಿದ್ದಾರೆ. ಕುಂಭೋತ್ಸವದ ಮೂಲಕ ಭಕ್ತಿ, ಶ್ರದ್ಧೆ ಹಾಗೂ ಮಹಿಳಾ ಶಕ್ತಿಯ ವೈಭವವನ್ನು ಸಾರಲಾಗುವುದು. ಜಾತ್ರಾ ಮಹೋತ್ಸವದ ಅಂಗವಾಗಿ ಅಯ್ಯಾಚಾರ ಹಾಗೂ ಲಿಂಗದೀಕ್ಷಾ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೂ ನಡೆಯಲಿವೆ. ರಥೋತ್ಸವದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶ್ರೀ ಅನ್ನದಾನೀಶ್ವರ ಸ್ವಾಮಿಗಳ ಆಶೀರ್ವಾದ ಪಡೆದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಮಠದ ಪೂಜ್ಯ ಮಹಾದೇವ ಸ್ವಾಮೀಜಿ ತಿಳಿಸಿದರು.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

### 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ : ಪೂರ್ವಭಾವಿ ಸಭೆ

# ಕಾರ್ಯ ಹಂಚಿಕೆಯಂತೆ ಅಚ್ಚುಕಟ್ಟಾಗಿ ಉತ್ಸವ ಆಚರಿಸಲು ಅಧಿಕಾರಿಗಳು ಕ್ರಮ ವಹಿಸಿ : ಡಾ.ಸುರೇಶ ಬಿ.ಇಟ್ನಾಳ

ಧೃತಿ ನ್ಯೂಸ್ ಸುದ್ದಿ

ಕೊಪ್ಪಳ: ಜಿಲ್ಲಾ ಕೇಂದ್ರದಲ್ಲಿ ಆಚ-ರಿಸಲಾಗುವ 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಬೇಕು. ಈ ಕುರಿತು ಕಾರ್ಯ ಹಂಚಿಕೆಯಂತೆ ಅಧಿಕಾರಿಗಳು ಕ್ರಮ ವಹಿಸಿ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾ-ರಿಗಳ ಕಛೇರಿ ಸಭಾಂಗಣದಲ್ಲಿ ಕರೆದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ-2026 ರ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸೆಪ್ಟೆಂಬರ್ 17 ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಆವರಣದಲ್ಲಿ ಧ್ವಜಾರೋಹಣವಾದ ನಂತರ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರ ಧ್ವಜಾರೋಹಣ ನೆರವೇರಲಿದ್ದು, ಈ ಕಾರ್ಯಕ್ರಮಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಎಲ್ಲಾ ಅಧಿಕಾ-ರಿಗಳು ಕಡ್ಡಾಯವಾಗಿ ಭಾಗವಹಿಸಬೇಕು. ಈ ಕುರಿತು ಹಾಜರಾತಿ ನಿರ್ವಹಿಸಲಾಗುವುದು.



ಈಗಾಗಲೇ ಇಲಾಖಾವಾರು ಕಾರ್ಯ ಹಂಚಿಕೆ ಮಾಡಿ ಜವಾಬ್ದಾರಿ ನೀಡಲಾಗಿದೆ. ಅದರಂತೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಿ, ಅಚ್ಚುಕಟ್ಟು ಆಚರಣೆಗೆ ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಮಕ್ಕಳಿಗೆ ಬೆಳಗಿನ ಉಪಹಾರದ ವ್ಯವಸ್ಥೆಯನ್ನು ಮಾಡಬೇಕು. ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದ ವೇದಿಕೆ ನಿರ್ಮಾಣ, ಪೆಂಡಾಲ ವ್ಯವಸ್ಥೆ ಸರಿಯಾಗಿ ಮಾಡಬೇಕು. ನಗರಸಭೆ ವತಿಯಿಂದ ಕ್ರೀಡಾಂಗಣದ ಸ್ವಚ್ಛತೆ, ಲೈಟಿಂಗ್ ವ್ಯವಸ್ಥೆ ಮತ್ತು ಕಾರ್ಯಕ್ರಮಕ್ಕೆ ಬರುವವ-ರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಶಾಲಾ-ಮಕ್ಕಳಿಂದ ವಿವಿಧ ಸಾಂಸ್ಕೃತಿ-ಕ ಕಾರ್ಯಕ್ರಮಗಳನ್ನು ಸಂಬಂಧಿಸಿದ ಇಲಾಖೆಯವರು ವ್ಯವಸ್ಥಿತವಾಗಿ ಆಯೋಜನೆ ಮಾಡಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ದಿನದಂದು ನಗರದ ಎಲ್ಲಾ ಕಡೆ ಲೈಟಿಂಗ್ ವ್ಯವಸ್ಥೆ ಇರುವಂತೆ ನಗರಸಭೆ ಅವರು ನೋಡಿಕೊಳ್ಳಬೇಕು. ಪೋಲೀಸ್ ಇಲಾಖೆ ಸೇರಿದಂತೆ ಎನ್.ಸಿ.ಸಿ., ಎನ್.ಎಸ್.ಎಸ್. ಮಕ್ಕಳು ಪಥ ಸಂಚಲನ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಯಾವುದೇ ಅಗ್ನಿ ಅವಘಡ ಸಂಭವಿಸದಂತೆ ನೋಡಿಕೊಳ್ಳಲು ಅಗ್ನಿಶಾಮಕ ದಳದ ವಾಹನವನ್ನು ಜಿಲ್ಲಾ ಕ್ರೀಡಾಂಗಣದ ಹತ್ತಿರ ನಿಲ್ಲಿಸಬೇಕು. ಆರೋಗ್ಯ ಇಲಾಖೆಯಿಂದ ಸಿಬ್ಬಂದಿ ಸಹಿತ ಅಂಬ್ಯುಲೆನ್ಸ್ ಒದಗಿಸಬೇಕು. ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತೆ ಒದಗಿಸಬೇಕು. ಕಾರ್ಯಕ್ರಮದಲ್ಲಿ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅವರು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಸಹಾಯಕ ಆಯುಕ್ತರಾದ ಮಹಮ್ಮದ್ ಜಿಲಾನಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಆರ್.ಹೇಮಂತಕುಮಾರ್, ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಜಿ.ಡಿ ಕೃಷ್ಣಮೂರ್ತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರವಾದಿಯವರ ಆದರ್ಶದಂತೆ ಕಾರುಣ್ಯ ಆಶ್ರಮದ ಸೇವೆ ನೆಡೆಯುತ್ತಿದೆ : ಆಯಿಷಾ

ಧೃತಿ ನ್ಯೂಸ್ ಸುದ್ದಿ

ಸಿಂಧನೂರು: ಮಾನ್ವಿ ತಾಲೂಕಿನ ಪೋತ್ನಾಳದ ಜಮಾ ಅತೆ ಇಸ್ಲಾಮಿ ಹಿಂದ್ ಮಹಿಳಾ ಘಟಕದ ಎಲ್ಲಾ ಪದಾಧಿಕಾರಿಗಳು ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರ ಜನ್ಮದಿನದ ನಿಮಿತ್ಯ ಸಿಂಧನೂರಿನ ಕಾರುಣ್ಯ ಆಶ್ರಮಕ್ಕೆ ಭೇಟಿ ನೀಡಿ ಆಶ್ರಯದಾತರುಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಆತ್ಮಸ್ಥೈರ್ಯ ತುಂಬಿ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಪೋತ್ನಾಳ ಘಟಕದ ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ಘಟಕದ ಅಧ್ಯಕ್ಷರಾದ ಆಯಿಷಾ ಮಾತನಾಡಿ ಪ್ರವಾದಿಯವರ ಆದರ್ಶದಂತೆ ಕಾರುಣ್ಯ ಆಶ್ರಮದ ಸೇವೆ ನಡೆಯುತ್ತಿದೆ.

ಸಮಾಜದಿಂದ ಕುಟುಂಬದಿಂದ ತಿರಸ್ಕೃತಗೊಂಡ ಮನಸ್ಸುಗಳನ್ನು ಒಟ್ಟುಗೂಡಿಸಿ ಅವರ ಹಿಂದಿನ ಜೀವನದ ಕಷ್ಟಗಳನ್ನು ಮರೆಸುವ ಮೂಲಕ ಮಾನವೀಯತೆಯ ಮಂದಿರವಾಗಿದೆ ನಮ್ಮ ಕಾರುಣ್ಯ ಆಶ್ರಮ. ಪ್ರವಾದಿಯವರು ಕೂಡ ಇಂತಹ ನೊಂದವರ ಬಾಳಿಗೆ ಬೆಳಕಾಗಿ ಸರ್ವಸಮಾನತೆಯ ಹಾದಿಯಲ್ಲಿ ಸರ್ವಧರ್ಮಕ್ಕೆ ಮಾನವೀಯತೆಯನ್ನು ಹಂಚುವ ನಡೆದಾಡುವ ದೇವರಾಗಿದ್ದರು. ಅವರ ಇಂದಿನ ಈ ಪವಿತ್ರ ಕಾರ್ಯದ ಮೂಲಕ ಅವರನ್ನು ನೆನಪಿಸಿಕೊಂಡು ಅವರ ಆಶೀರ್ವಾದದೊಂದಿಗೆ ಈ ಆಶ್ರಮದಲ್ಲಿ ಆಶ್ರಯ ಪಡೆಯುತ್ತಿರುವ ಎಲ್ಲಾ ನಮ್ಮ ತಂದೆ ತಾಯಿಗಳ ಸಮಾನರಾಗಿರುವ ಹಿರಿಯ-ರಿಗೂ ಹಾಗೂ ವಯಸ್ಕರ ಬುದ್ಧಿಮಾಂದ್ಯರ ಆಶೀರ್ವಾದ ನಮ್ಮ ಜನ್ಮ ಸಾರ್ಥಕವಾಗಿದೆ. ಇಂದಿನ ಸಮಾಜದಲ್ಲಿ ಮಕ್ಕಳಾದವರು ಹೆತ್ತವರನ್ನು ನಮ್ಮಂತಹ ವೃದ್ಧಾಶ್ರಮಕ್ಕೆ ತಳ್ಳಬಾರದು ಎನ್ನುವ ಸಂದೇಶವನ್ನು ಸಮಾಜ-ಕ್ಕೆ ಸಾರುತ್ತಿರುವ ಈ ಕಾರುಣ್ಯ ಕುಟುಂಬ ನಮ್ಮ ಕಲ್ಯಾಣ ಕರ್ನಾಟಕದ ಕರುಣೆಯ ಕುಟುಂಬವಾಗಿದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು.



ನಂತರ ಜಿ. ಎಚ್. ಪಿ. ಎಸ್. ಪೋತ್ನಾಳ ಶಾಲೆಯ ಸಹ ಶಿಕ್ಷಕರಾದ ಸುಮಾ ಮಾತನಾಡಿ ಕರುಣೆಯ ಪ್ರತಿ-ರೂಪದ ಕಾರುಣ್ಯಾಶ್ರಮವು ಪುಣ್ಯದ ಪವಿತ್ರ ಮಂದಿರವಾಗಿದೆ. ಇಂತಹ ಪುಣ್ಯ ಕಾರ್ಯಗಳನ್ನು ಮಾಡುತ್ತಿರುವ ಸಾಮಾನ್ಯ ಬಡ ಕುಟುಂಬದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರು ಸಮಾಜದ ದೇವತಾ ಮನುಷ್ಯರಾಗಿದ್ದಾರೆ. ಅವರ ಆದರ್ಶ ಮಾರ್ಗದರ್ಶನ ನಮ್ಮ ಸಮಾಜದ ಬಹುದೊಡ್ಡ ಆಸ್ತಿಯಾಗಿದೆ. ಸ್ವಾರ್ಥದ ಈ ಜಗತ್ತಿನಲ್ಲಿ ನಿಸ್ವಾರ್ಥದೊಂದಿಗೆ ಮಾಡುತ್ತಿರುವ ಕಾರುಣ್ಯ ಆಶ್ರಮದ ಸೇವೆಗೆ ನಾವೆಲ್ಲರೂ ಜೊತೆಗಿರುತ್ತೇವೆ ಎಂದು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಪೋತ್ನಾಳದ ಜಮಾಅತೆ ಇಸ್ಲಾಮಿ ಹಿಂದ್ ಮಹಿಳಾ ಘಟಕದ ಕಾರ್ಯಕರ್ತರುಗಳಾದ ಶಾಹಿನ್ ಬೇಗಂ. ಕೌಸರ್ ಬೇಗಂ. ತರನ್ನುಮ್. ತಸ್ಲೀಮ್ ಬೇಗಂ. ಉಮ್ಮ ಐವಾನ್. ಮುನ್ನಾ ಬೀ. ಸುಮಾ ಆಶ್ರಮದ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ. ಜ್ಯೋತಿ. ಮಹಾಂತೇಶ ದೋಟಿಹಾಳ ಹಾಗೂ ಅನೇಕರು ಉಪಸಿತರಿದ್ದರು.

## ಬರ ಪೀಡಿತ ಪ್ರದೇಶ ಘೋಷಣೆಗೆ ಸರ್ಕಾರದ ನಿರ್ಲಕ್ಷ್ಯ ವೀರೇಶ ನಿಡಗುಂದಿಮಠ

ಧೃತಿ ನ್ಯೂಸ್ ಸುದ್ದಿ

ಕುಷ್ಟಗಿ: ತಾಲೂಕಿನಲ್ಲಿ ಸಕಾಲದಲ್ಲಿ ಮಳೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತನೆಗಾಗಿ ಬೀಜ, ಗೊಬ್ಬರ ಸೇರಿದಂತೆ ಅಗತ್ಯ ಕೃಷಿ ಪರಿಕರಗಳನ್ನು ಸಾಲ-ಶೂಲ ಮಾಡಿ ಖರೀದಿಸಿರುವ ರೈತರು, ಮಳೆ ಕೊರತೆಯಿಂದ ಕಂಗಾಲಾಗಿದ್ದಾರೆ.



ಆದರೂ ಕುಷ್ಟಗಿ ತಾಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸುವಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿದೆ ಎಂದು ಜಾತ್ಯತೀತ ಜನತಾದಳದ ತಾಲೂಕು ಅಧ್ಯಕ್ಷ ವೀರೇಶ ನಿಡಗುಂದಿಮಠ ಆರೋಪಿಸಿದ್ದಾರೆ. ಮಳೆ ಕೊರತೆಯಿಂದ ಯಲಬುರ್ಗಾ, ಕುಷ್ಟಗಿ ಹಾಗೂ ಕೊಪ್ಪಳ ತಾಲೂಕುಗಳ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಈ ತಾಲೂಕುಗಳಲ್ಲಿನ ಬರ ಪರಿಸ್ಥಿತಿಯನ್ನು ಸರ್ಕಾರ ಮರುಪರಿಶೀಲಿಸಿ, ರೈತರ ಹಿತ ಕಾಪಾಡುವ ನಿಟ್ಟಿನಲ್ಲಿ ತಕ್ಷಣ ಕ್ರಮ ಕೈಗೊಳ್ಳಬೇಕು. ಕುಷ್ಟಗಿ ತಾಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸಿ, ಅರ್ಹ ರೈತರಿಗೆ ಸರ್ಕಾರದ ಬರ ಪರಿಹಾರ ಸೌಲಭ್ಯಗಳನ್ನು ಒದಗಿಸಬೇಕು ಎಂದು ಅವರು ಒತ್ತಾಯಿಸಿದರು. ರೈತರ ಸಂಕಷ್ಟವನ್ನು ಕಡೆಗಣಿಸಿ ಬರ ಘೋಷಣೆಯಲ್ಲಿ ಮತ್ತಷ್ಟು ವಿಳಂಬ ಮಾಡಿದರೆ ತಾಲೂಕಾದ್ಯಂತ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದ ಅವರು, ತಕ್ಷಣ ಕುಷ್ಟಗಿ ತಾಲೂಕನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಆಗ್ರಹಿಸಿದರು.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

# ರಾಜ್ಯದ ಅನುದಾನಕ್ಕಾಗಿ ಪಾದಯಾತ್ರೆ ಮಾಡಲಿ ಬಿಜೆಪಿ ; ಕಾಂಗ್ರೆಸ್ ವಿರುದ್ಧದ ಯಾತ್ರೆ ರಾಜಕೀಯ ಬೂಟಾಟಿಕೆ : ಕಾಂಗ್ರೆಸ್ ಮುಖಂಡರ ವಾಗ್ದಾಳಿ

ಧೃತಿ ನ್ಯೂಸ್ ಸುದ್ದಿ

ಕಾರಟಗಿ: ಹಿಂದುಳಿದ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕಾಂಗ್ರೆಸ್ ಸರಕಾರ 371(ಜೆ) ವಿಶೇಷ ಸ್ಥಾನಮಾನ ನೀಡಿದ್ದು, ಕಳೆದ 12 ವರ್ಷಗಳಿಂದ ಕೇಂದ್ರದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದರೂ ರಾಜ್ಯಕ್ಕೆ ಹಾಗೂ ಕಲ್ಯಾಣ ಕರ್ನಾಟಕಕ್ಕೆ ನೀಡಿರುವ ಕೊಡುಗೆ ಏನು ಎಂಬುದನ್ನು ಬಿಜೆಪಿ ನಾಯಕರು ಸ್ಪಷ್ಟಪಡಿಸಬೇಕು ಎಂದು ಕಾಂಗ್ರೆಸ್ ಮುಖಂಡರಾದ ಶಿವರೆಡ್ಡಿ ನಾಯಕ, ಶರಣೇಗೌಡ ಮಾಲಿಪಾಟೀಲ್, ಶಶಿಧರಗೌಡ ಪಾಟೀಲ್ ಹಾಗೂ ಶರಣಪ್ಪ ಪರಕಿ ಅಯ್ಯಪ್ಪ ಉಪ್ಪಾರ್ ಆಗ್ರಹಿಸಿದರು.

ಪಟ್ಟಣದ ಸಚಿವ ಶಿವರಾಜ ಎಸ್ ತಂಗಡಗಿ ಅವರ ಗೃಹ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ವಿರುದ್ಧ ಬೂಟಾಟಿಕೆಯ ಪಾದಯಾತ್ರೆ ನಡೆಸುವ ಬದಲು, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬರಬೇಕಾದ ಅನುದಾನ ಹಾಗೂ ಹಣಕ್ಕಾಗಿ ಬಿಜೆಪಿ ನಾಯಕರು ಪಾದಯಾತ್ರೆ ನಡೆಸಲಿ ಎಂದು ಸವಾಲು ಹಾಕಿದರು.

**ವಿಜಯೇಂದ್ರ ಪ್ರಾಯೋಜಿತ ಕಾರ್ಯಕ್ರಮ:**

ಬಿಜೆಪಿ ನಡೆಸುತ್ತಿರುವ ಪಾದಯಾತ್ರೆ ವಿಜಯೇಂದ್ರಪ್ರಾಯೋಜಿತಕಾರ್ಯಕ್ರಮವಾಗಿದೆ. ಬಿಜೆಪಿಯಲ್ಲೇ ಮೂಲೆಗುಂಪಾಗಿರುವ ಹಾಗೂ ಪಕ್ಷದ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಯುವ



ಆತಂಕದಲ್ಲಿರುವ ವಿಜಯೇಂದ್ರ ಅವರು ತಮ್ಮ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಈ ಯಾತ್ರೆ ನಡೆಸುತ್ತಿದ್ದಾರೆ ಎಂದು ಟೀಕಿಸಿದರು. ಇದೇ ಕಾರಣಕ್ಕೆ ಅವರದೇ ಪಕ್ಷದ ಕೇಂದ್ರ ಸಚಿವರಾದ ವಿ.ಸೋಮಣ್ಣ ಹಾಗೂ ಎಚ್.ಡಿ.ಕುಮಾರಸ್ವಾಮಿ ಅವರು ಪಾದಯಾತ್ರೆಯ ಅಗತ್ಯವೇನು ಎಂದು ಪ್ರಶ್ನಿಸುವಂತಾಗಿದೆ ಎಂದರು. ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ ವಿಜಯೇಂದ್ರ ಹಾಗೂ ಬಿಜೆಪಿ ನಾಯಕರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ ಎಂದು ಪ್ರಶ್ನಿಸಿದ ಮುಖಂಡರು, ವಿಜಯೇಂದ್ರ ವಿರುದ್ಧ ಕೇಳಿಬಂದಿರುವ ಚೆಕ್ ಮೂಲಕ ಲಂಚ ಪಡೆದ ಆರೋಪಗಳ ಬಗ್ಗೆ ಜನರಿಗೆ ತಿಳಿದಿದೆ ಎಂದರು. ಗಣಿ ಅಕ್ರಮದ ಆರೋಪ ಎದುರಿಸಿರುವ ಜನಾರ್ದನ ರೆಡ್ಡಿ ಸೇರಿದಂತೆ ಬಿಜೆಪಿ ನಾಯಕರ ಮೇಲೆಯೇ ಹಲವು ಆರೋಪಗಳಿದ್ದು, ಕಾಂಗ್ರೆಸ್ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡುತ್ತಿರುವುದು 'ಉಲ್ಟಾ ಚೋರ್ ಕೊತ್ವಾಲ್ ಕೋ ಡಾಂಟೆ' ಎಂಬಂತಾಗಿದೆ ಎಂದು ವ್ಯಂಗ್ಯವಾಡಿದರು.

**ಕಲ್ಯಾಣ ಕರ್ನಾಟಕದ ಸಮಸ್ಯೆಗಳ ಬಗ್ಗೆ ಮೌನ :**

2014ರಿಂದ ಕಲ್ಯಾಣ ಕರ್ನಾಟಕ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಸಂಸದರನ್ನು ಆಯ್ಕೆ ಮಾಡಿದ್ದರೂ, ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಈ ಭಾಗಕ್ಕೆ ನೀಡಿರುವ ಕೊಡುಗೆ ಏನು ಎಂಬುದನ್ನು ತಿಳಿಸಲಿ ಎಂದು ಒತ್ತಾಯಿಸಿದರು. ಭಾಗದ ಜ್ವಲಂತ ಸಮಸ್ಯೆಗಳ ಕುರಿತು ಬಿಜೆಪಿ ನಾಯಕರು ಮಾತನಾಡುತ್ತಿಲ್ಲ ಎಂದು ಆರೋಪಿಸಿದರು. ರೈಸ್ ಪಾರ್ಕ್‌ಗೆ ನಬಾರ್ಡ್‌ನಿಂದ 136 ಕೋಟಿ ಅನುದಾನ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರಕಾರದ ಅವಧಿಯಲ್ಲಿ ಬಂದಿತ್ತು. ಬಳಿಕ ಅಧಿಕಾರಕ್ಕೆ ಬಂದ ಬಿಜೆಪಿ ಸರಕಾರ ಅದನ್ನು ಸಮರ್ಪಕವಾಗಿ ಬಳಸಿಕೊಂಡು ಅಭಿವೃದ್ಧಿಪಡಿಸುವಲ್ಲಿ ವಿಫಲವಾಗಿದೆ. ಇದೀಗ ರೈಸ್ ಪಾರ್ಕ್ ಅಭಿವೃದ್ಧಿ ವಿಚಾರದಲ್ಲಿ ಸಚಿವ ಶಿವರಾಜ ತಂಗಡಗಿ ವಿರುದ್ಧ ಆರೋಪ ಮಾಡುತ್ತಿರುವುದು ರಾಜಕೀಯ ಗೂಬೆ ಕೂರಿಸುವ ಪ್ರಯತ್ನ ಎಂದು ದೂರಿದರು.

**ಕೊಪ್ಪಳದಲ್ಲಿ ಹಾಸ್ಟೆಲ್‌ಗಳ ಹೆಚ್ಚಳ:**

ಒಂದು ಕಾಲದಲ್ಲಿ ಕಡಿಮೆ ಹಾಸ್ಟೆಲ್‌ಗಳನ್ನು ಹೊಂದಿದ್ದ ಜಿಲ್ಲೆ ಎಂಬ ಅಪಕೀರ್ತಿಗೆ ಒಳಗಾಗಿದ್ದ ಕೊಪ್ಪಳದಲ್ಲಿ ಇದೀಗ ಹೆಚ್ಚಿನ ಸಂಖ್ಯೆಯಲ್ಲಿ ಹಾಸ್ಟೆಲ್‌ಗಳನ್ನು ನಿರ್ಮಿಸಲಾಗುತ್ತಿದೆ. ಶೋಷಿತ, ಹಿಂದುಳಿದ ಹಾಗೂ ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಕಾಂಗ್ರೆಸ್ ಸರಕಾರ ಆದ್ಯತೆ ನೀಡುತ್ತಿದೆ ಎಂದು ಹೇಳಿದರು.

ಬಿಜೆಪಿ ಪಾದಯಾತ್ರೆಯಿಂದ ರಸ್ತೆ ಸಂಚಾರಕ್ಕೆ ತೊಂದರೆಯಾಗಿದ್ದು, ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಸಮಸ್ಯೆ ಎದು-ರಿಸುವಂತಾಗಿದೆ. ಪಾದಯಾತ್ರೆಯ ಅಗತ್ಯವೇನು ಎಂಬುದನ್ನು ಸೋಮಣ್ಣ, ಕುಮಾರಸ್ವಾಮಿ ಸೇ-ರಿದಂತೆ ಬಿಜೆಪಿ ನಾಯಕರು ಜನರಿಗೆ ವಿವ-ರಿಸಲಿ. ಸ್ವಪಕ್ಷದವರೇ ಪ್ರಶ್ನಿಸುವಂತಾಗಿರುವ ಈ ಯಾತ್ರೆ, ವಿಜಯೇಂದ್ರ ಅವರ ರಾಜ-ಕೀಯ ಅಸ್ತಿತ್ವ ಉಳಿಸಿಕೊಳ್ಳುವ ಪ್ರಯತ್ನವಾಗಿದೆ ಎಂದು ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ಪುರಸಭೆ ಅಧ್ಯಕ್ಷ ಮಂಜುನಾಥ ಮೇಗೂರು, ಕೆ.ಸಿದ್ದನಗೌಡ, ಬಿ.ಶರಣಯ್ಯಸ್ವಾಮಿ, ಸೇರಿದಂತೆ ಹಲವರು ಇದ್ದರು.

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

## ಜಂಬೂಸವಾರಿಗೆ ಗಜಪಡೆ ತಾಲೀಮು, 450 ಕೆಜಿ ಭಾರ ಹೊತ್ತ ಮಹೇಂದ್ರ



ಮೈಸೂರು: ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿಗೆ ಗಜಪಡೆಯನ್ನು ಸನ್ನದ್ಧಗೊಳಿಸುವ ಪ್ರಕ್ರಿಯೆ ಚುರುಕುಗೊಂಡಿದ್ದು, ಸಂಪ್ರದಾಯದಂತೆ ಆನೆಗಳಿಗೆ ಭಾರ ಹೊರುವ ತಾಲೀಮು ಆರಂಭವಾಗಿದೆ.

ಸೋಮೇಶ್ವರ ದೇವಾಲಯದ ಬಳಿ ಎಲ್ಲ ಆನೆಗಳಿಗೂ ಅರ್ಚಕ ಪ್ರಸಾದ್ ರಾವ್ ನೇತೃತ್ವದಲ್ಲಿ ಸಾಂಪ್ರದಾಯಿಕವಾಗಿ ಪೂಜೆ ಸಲ್ಲಿಸಲಾಯಿತು. ಈ ವೇಳೆ ಗಾದಿ, ನವ್ದಾ ಹಾಗೂ ಮರಳಿನ ಮೂಟೆಗಳನ್ನು ಇರಿಸುವ ಕಬ್ಬಿಣದ ತೊಟ್ಟಿಲಿಗೂ ಪೂಜೆ ನೆರವೇರಿಸಲಾಯಿತು. ಬಳಿಕ ಮಹೇಂದ್ರ ಆನೆಗೆ ಗಾದಿ ಹಾಗೂ ನವ್ದಾ ಬಿಗಿದು, ಅದರ ಮೇಲೆ ತೊಟ್ಟಿಲನ್ನು ಅಳವಡಿಸಲಾಯಿತು. ತೊಟ್ಟಿಲಿನಲ್ಲಿ ತಲಾ 50 ಕೆಜಿ ತೂಕದ 9 ಮರಳಿನ ಮೂಟೆಗಳನ್ನು ಇರಿಸುವ ಮೂಲಕ ಒಟ್ಟು 450 ಕೆಜಿ ಭಾರ ಹೊರುವ ತಾಲೀಮಿಗೆ ಚಾಲನೆ ನೀಡಲಾಯಿತು. ಮಹೇಂದ್ರ ಆನೆಯೊಂದಿಗೆ ಲಕ್ಷ್ಮಿ ಹಾಗೂ ಕಾವೇರಿ ಆನೆಗಳು ಸಾಥ್ ನೀಡಿದವು. ಅರಮನೆಯಿಂದ ಬಲರಾಮ ದ್ವಾರದ ಮೂಲಕ ಹೊರಟ ಗಜಪಡೆ, ಜಂಬೂ ಸವಾರಿ ಸಾಗುವ ಮಾರ್ಗವಾದ ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆ, ಆಯುರ್ವೇದ ಆಸ್ಪತ್ರೆ, ಹಳೇ ಆರ್‌ಎಂಸಿ ವೃತ್ತ, ಹೊಸಬೀದಿ ಮಾರ್ಗವಾಗಿ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೆ ತೆರಳಿ, ಬಳಿಕ ಇದೇ ಮಾರ್ಗದಲ್ಲಿ ಅರಮನೆಗೆ ವಾಪಸ್ಸಾಯಿತು. ಮೊದಲ ದಿನದ ಭಾರ ಹೊರುವ ತಾಲೀಮು ಯಾವುದೇ ಅಳುಕಿಲ್ಲದೆ ಯಶಸ್ವಿಯಾಗಿ ನಡೆಯಿತು. ಮಹೇಂದ್ರ ಗಜಗಾಂಭೀರ್ಯದಿಂದ ಹೆಜ್ಜೆ ಹಾಕಿದರೆ, ಲಕ್ಷ್ಮಿ ಹಾಗೂ ಕಾವೇರಿ ಆನೆಗಳು ಸಾಥ್ ನೀಡಿದವು. ಮಹೇಂದ್ರನ ಹಿಂದೆ ಏಕಲವ್ಯ, ಗೋಪಿ, ಪ್ರಶಾಂತ್, ಶ್ರೀರಾಮ ಹಾಗೂ ಧನಂಜಯ ಆನೆಗಳು ಸಾಗಿದವು. ಅರಮನೆಗೆ ಮೊದಲ ತಂಡದಲ್ಲಿ ಒಟ್ಟು 9 ಆನೆಗಳನ್ನು ಕರೆತರಲಾಗಿದ್ದು, ಶ್ರೀಕಂಠ ಆನೆಯನ್ನು ತಾಲೀಮಿನಿಂದ ಹೊರಗಿಡಲಾಗಿದೆ. ಉಳಿದ ಎಲ್ಲ ಆನೆಗಳಿಗೂ ಹಂತ ಹಂತವಾಗಿ ಭಾರ ಹೊರುವ ತಾಲೀಮು ನಡೆಸಲಾಗುತ್ತಿದೆ. ಜಂಬೂ ಸವಾರಿಯ ದಿನ ಚಿನ್ನದ ಅಂಬಾರಿಯನ್ನು ಹೊರುವ ಜವಾಬ್ದಾರಿ ಸೇರಿದಂತೆ ವಿವಿಧ ಜವಾಬ್ದಾರಿಗಳಿಗೆ ಗಜಪಡೆಯನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲೂ ತಾಲೀಮು ಮುಂದುವರಿಯಲಿದೆ.

## ಅಮೃತಸರ ವಿಮಾನ ನಿಲ್ದಾಣದ ಬಳಿ ಅನುಮಾನಾಸ್ಪದ ಡ್ರೋನ್‌ಗಳ ಹಾರಾಟ



ಅಮೃತಸರ: ಅಮೃತಸರದ ಶ್ರೀ ಗುರು ರಾಮ್ ದಾಸ್ ಜಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಕಾರ್ಯಾಚರಣಾ ಪ್ರದೇಶ ಹಾಗೂ ರನ್‌ವೇ ಸಮೀಪ 2ರಿಂದ 4 ಅನುಮಾನಾಸ್ಪದ ಡ್ರೋನ್‌ಗಳು ಅಥವಾ ಹಾರುವ ವಸ್ತುಗಳು ಪತ್ತೆಯಾದ ಹಿನ್ನೆಲೆಯಲ್ಲಿ ಭದ್ರತಾ ಸಂಸ್ಥೆಗಳು ತೀವ್ರ ಕಟ್ಟೆಚ್ಚರ ವಹಿಸಿವೆ.

ರಾಜಲ ಗ್ರಾಮದ ದಿಕ್ಕಿನಿಂದ ವಿಮಾನ ನಿಲ್ದಾಣದತ್ತ ಬಂದಿರುವ ಈ ಅನುಮಾನಾಸ್ಪದ ಹಾರುವ ವಸ್ತುಗಳು ರನ್‌ವೇ ಹಾಗೂ ಸೂಕ್ಷ್ಮ ಪ್ರದೇಶಗಳ ಮೇಲೆ ಕೆಲವು ನಿಮಿಷಗಳ ಕಾಲ ಸುಳಿದಾಡಿರುವುದು ವಾಯು ಸಂಚಾರ ನಿಯಂತ್ರಣ ವ್ಯವಸ್ಥೆಯ ಗಮನಕ್ಕೆ ಬಂದಿದೆ ಎನ್ನಲಾಗಿದೆ. ಪ್ರಯಾಣಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಮುನ್ನೆಚ್ಚರಿಕಾ ಕ್ರಮವಾಗಿ ಒಳಬರುವ ಏಳು ವಿಮಾನಗಳ ಮಾರ್ಗವನ್ನು ಬದಲಾಯಿಸಿ ದೆಹಲಿ ಹಾಗೂ ಚಂಡೀಗಢ ವಿಮಾನ ನಿಲ್ದಾಣಗಳಿಗೆ ತಿರುಗಿಸಲಾಗಿದೆ. ಘಟನೆಯ ಬೆನ್ನಲ್ಲೇ ವಿಮಾನ ನಿಲ್ದಾಣದ ಸುತ್ತಮುತ್ತ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ.

**ಗಡಿಗೆ ಸಮೀಪವಿರುವುದರಿಂದ ಹೆಚ್ಚಿನ ಭದ್ರತೆ**

ಅಮೃತಸರ ವಿಮಾನ ನಿಲ್ದಾಣವು ಭಾರತ-ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿಯಿಂದ ವೈಮಾನಿಕವಾಗಿ 30 ಕಿ.ಮೀ.ಗಿಂತಲೂ ಕಡಿಮೆ ಅಂತರದಲ್ಲಿದೆ. ಹೀಗಾಗಿ ಗಡಿ ಪ್ರದೇಶಕ್ಕೆ ಸಮೀಪವಿರುವ ಈ ವಿಮಾನ ನಿಲ್ದಾಣವನ್ನು ಭದ್ರತಾ ದೃಷ್ಟಿಯಿಂದ ಅತ್ಯಂತ ಸೂಕ್ಷ್ಮ ಪ್ರದೇಶವೆಂದು ಪರಿಗಣಿಸಲಾಗಿದೆ. ಗಡಿ ಭಾಗದಲ್ಲಿ ಈ ಹಿಂದೆಯೂ ಅನುಮಾನಾಸ್ಪದ ಡ್ರೋನ್ ಚಟುವಟಿಕೆಗಳು ವರದಿಯಾಗಿದ್ದು, ಜಮ್ಮು ಮತ್ತು ಕಾಶ್ಮೀರದ ರಾಜೌರಿ ಜಿಲ್ಲೆಯ ನೌಶೇರಾ ಸೆಕ್ಟರ್‌ನಲ್ಲೂ ಪಾಕಿಸ್ತಾನದಿಂದ ಡ್ರೋನ್‌ಗಳ ಮೂಲಕ ನುಸುಳುವಿಕೆ ನಡೆಸಿರುವ ಶಂಕೆಗಳು ವ್ಯಕ್ತವಾಗಿದ್ದವು. ಅಮೃತಸರ ವಿಮಾನ ನಿಲ್ದಾಣದ ಸಮೀಪ ಇದೀಗ ಅನುಮಾನಾಸ್ಪದ ಡ್ರೋನ್‌ಗಳು ಕಾಣಿಸಿಕೊಂಡಿರುವುದು ಭದ್ರತಾ ಪಡೆಗಳ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ. ಘಟನೆಗೆ ಸಂಬಂಧಿಸಿದಂತೆ ಭದ್ರತಾ ಸಂಸ್ಥೆಗಳು ತೀವ್ರ ತನಿಖೆ ಹಾಗೂ ಶೋಧ ಕಾರ್ಯಾಚರಣೆ ಮುಂದುವರಿಸಿದ್ದು, ಹಾರುವ ವಸ್ತುಗಳ ಸ್ವರೂಪ ಮತ್ತು ಅವುಗಳ ಮೂಲದ ಬಗ್ಗೆ ಮಾಹಿತಿ ಕಲೆಹಾಕಲಾಗುತ್ತಿದೆ.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗೆ ಅರ್ಜಿ ಆಹ್ವಾನ

ವಿಜಯನಗರ: ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಹಿಳಾ ಮತ್ತು ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕಂ ಕ್ರಷ್ ಕೇಂದ್ರದ ಕಾರ್ಯಕರ್ತೆ ಮತ್ತು ಸಹಾಯಕಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 28 ಕೊನೆಯ ದಿನವಾಗಿದೆ.

ಅಂಗನವಾಡಿ ಕಂ ಕ್ರಷ್ ಕೇಂದ್ರದಗಳಲ್ಲಿ ಖಾಲಿ ಇರುವ ಒಟ್ಟು 6 ಅಂಗನವಾಡಿ ಕಾರ್ಯಕರ್ತೆ ಮತ್ತು 6 ಅಂಗನವಾಡಿ ಸಹಾಕಿಯದ ಗೌರವ ಸೇವೆಯ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳು ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಛೇರಿಯಿಂದ ನಿಗದಿತ ಅರ್ಜಿ ನಮೂನೆ ಪಡೆದು, ಸಂಬಂಧಿತ ದಾಖಲೆಗಳೊಂದಿಗೆ ಮುಚ್ಚಿದ ಲಕೋಟೆಯಲ್ಲಿ ಶಿಶು ಅಭಿವೃದ್ಧಿ ಯೋಜನಾ ಕಛೇರಿಯಲ್ಲಿ ಸಲ್ಲಿಸಬಹುದು. ದೂ.ಸಂ: 08397-238156 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

# ದೆಹಲಿ ಕಟ್ಟಡ ಕುಸಿತ ದುರಂತ : ಮೃತರ ಸಂಖ್ಯೆ 6ಕ್ಕೆ ಏರಿಕೆ, ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶ

ನವದೆಹಲಿ: ದೆಹಲಿಯ ಸತ್ಯ ನಿಕೇತನ ಪ್ರದೇಶದಲ್ಲಿ ಹಳೆಯ ಕಟ್ಟಡವೊಂದು ಕುಸಿದು ಆರು ಮಂದಿ ಮೃತಪಟ್ಟಿರುವ ಘಟನೆ ನಡೆದಿದೆ. ದುರಂತದ ಬಳಿಕ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ (ಎನ್‌ಡಿಆರ್‌ಎಫ್), ಅಗ್ನಿಶಾಮಕ ದಳ, ಪೊಲೀಸರು ಹಾಗೂ ಇತರ ತುರ್ತು ಸೇವಾ ತಂಡಗಳು ರಕ್ಷಣಾ ಕಾರ್ಯಾಚರಣೆ ಮುಂದುವರಿಸಿವೆ.

ಸುಮಾರು 50 ವರ್ಷ ಹಳೆಯದಾದ ಕಟ್ಟಡದ ನೆಲಮಾಳಿಗೆಯಲ್ಲಿ ಯಾವುದೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳದೆ ದುರಸ್ತಿ ಕಾರ್ಯ ನಡೆಸಿದ್ದೇ ಕಟ್ಟಡ ಕುಸಿತಕ್ಕೆ ಪ್ರಮುಖ ಕಾರಣವಾಗಿರಬಹುದು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ದುರಸ್ತಿ ಕಾರ್ಯದ ವೇಳೆ ಕಂಬವೊಂದು ಅಸ್ಥಿರಗೊಂಡು ತನ್ನ ರಚನಾತ್ಮಕ ಬೆಂಬಲ ಕಳೆದುಕೊಂಡ ಪರಿಣಾಮ ಇಡೀ ಕಟ್ಟಡ ಧರಾಶಾಯಿಯಾಗಿದೆ ಎನ್ನಲಾಗಿದೆ. ಅವಶೇಷಗಳಡಿಯಿಂದ ಒಟ್ಟು 12 ಮಂದಿಯನ್ನು ರಕ್ಷಣಾ ಸಿಬ್ಬಂದಿ ಹೊರತೆಗೆದಿದ್ದು, ಅವರಲ್ಲಿ ಆರು ಮಂದಿ ಮೃತಪಟ್ಟಿದ್ದಾರೆ. ಗಾಯಗೊಂಡಿರುವ ಉಳಿದ ಆರು ಮಂದಿಯ ಆರೋಗ್ಯ ಸ್ಥಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಘಟನಾ ಸ್ಥಳಕ್ಕೆ ಇಂದು ಬೆಳಗ್ಗೆ ಭೇಟಿ ನೀಡಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಕಟ್ಟಡದ ಸುಮಾರು ಶೇ.80ರಷ್ಟು ಅವಶೇಷಗಳನ್ನು ತೆರವುಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ನೆಲಮಾಳಿಗೆಯಲ್ಲಿ ನೀರು ಸಂಗ್ರಹವಾಗಿರುವುದು ಹಾಗೂ ಹಳೆಯ ಕಟ್ಟಡದ ರಚನೆಯ ಮೇಲೆ ನಡೆಸಲಾದ ಕಾಮಗಾರಿಯೇ ಕುಸಿತಕ್ಕೆ ಕಾರಣವಾಗಿರಬಹುದು ಎಂದು ಅವರು ಹೇಳಿದ್ದಾರೆ. ಗಾಯಾಳುಗಳಿಗೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಹಾಗೂ ಪ್ರಧಾನಿ ಕಚೇರಿಯ ನೇರ ಮೇಲ್ವಿಚಾರಣೆಯಲ್ಲಿ ಅಗತ್ಯವಿರುವ ಅತ್ಯುತ್ತಮ ಚಿಕಿತ್ಸೆ ಒದಗಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

**ಅಪಾಯಕಾರಿ ಕಟ್ಟಡಗಳ ತೆರವಿಗೆ ನೋಟಿಸ್**

ದುರಂತದ ಹಿನ್ನೆಲೆಯಲ್ಲಿ ಸತ್ಯ ನಿಕೇತನದ ಮನೆ ಸಂಖ್ಯೆ 13 ಸೇರಿದಂತೆ ಸುತ್ತಮುತ್ತಲಿನ ಅಪಾಯಕಾರಿ ಕಟ್ಟಡಗಳನ್ನು ಗುರುತಿಸಿ, ದೆಹಲಿ ಮುನ್ಸಿಪಲ್ ಕಾರ್ಪೊರೇಷನ್ ಕಾಯ್ದೆಯ ಸೆಕ್ಷನ್ 348ರ ಅಡಿಯಲ್ಲಿ ಅವುಗಳನ್ನು ತೆರವುಗೊಳಿಸುವಂತೆ ನೋಟಿಸ್ ಜಾರಿ ಮಾಡಲಾಗಿದೆ. ಕುಸಿದ ಕಟ್ಟಡದ ಪಕ್ಕದಲ್ಲೇ ಮತ್ತೊಂದು ಅಸ್ಥಿರ ಕಟ್ಟಡ ಇರುವುದರಿಂದ ರಕ್ಷಣಾ ಸಿಬ್ಬಂದಿಗೆ ಕಾರ್ಯಾಚರಣೆ ನಡೆಸುವುದು ಸವಾಲಾಗಿ ಪರಿಣಮಿಸಿದೆ. ಹೀಗಾಗಿ ಪಕ್ಕದ ಕಟ್ಟಡಗಳಿಗೆ ಮತ್ತಷ್ಟು ಹಾನಿಯಾಗದಂತೆ ಎಚ್ಚರಿಕೆ ವಹಿಸಿ ಅವಶೇಷಗಳನ್ನು ತೆರವುಗೊಳಿಸಲಾಗುತ್ತಿದೆ.

**ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶ**

ದುರಂತದ ಕುರಿತು ಮುಖ್ಯಮಂತ್ರಿ ರೇಖಾ ಗುಪ್ತಾ ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶಿಸಿದ್ದಾರೆ. ಕಟ್ಟಡ ಮಾಲೀಕರ ವಿರುದ್ಧ ದೂರು ದಾಖಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ತನಿಖೆಯಲ್ಲಿ ಯಾರೇ ತಪ್ಪಿತಸ್ಥರೆಂದು ಪತ್ತೆಯಾದರೂ ಅವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ. ರಕ್ಷಣಾ ಕಾರ್ಯಾಚರಣೆಯಲ್ಲಿ ಎನ್‌ಡಿಆರ್‌ಎಫ್, ದೆಹಲಿ ಅಗ್ನಿಶಾಮಕ ದಳ, ಪೊಲೀಸ್ ಸಿಬ್ಬಂದಿ ಹಾಗೂ ಇತರ ತುರ್ತು ಸೇವಾ ತಂಡಗಳು ನಿರಂತರವಾಗಿ ಕಾರ್ಯನಿರ್ವಹಿಸುತ್ತಿವೆ.

## ಕೋರಮಂಗಲದಲ್ಲಿ ನಿರ್ಮಿಸಲಾದ ಅತ್ಯಾಧುನಿಕ ತ್ಯಾಜ್ಯ ಸಂಸ್ಕರಣ ಘಟಕಕ್ಕೆ ಚಾಲನೆ

ಬೆಂಗಳೂರು: ನಗರದ ತ್ಯಾಜ್ಯವನ್ನು ಸಮಸ್ಯೆಯಾಗಿ ಪರಿಗಣಿಸುವ ಬದಲು ಅದನ್ನು ಸಂಪನ್ಮೂಲವನ್ನಾಗಿ ಪರಿವರ್ತಿಸುವ ಉದ್ದೇಶದಿಂದ ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಕೋರಮಂಗಲದಲ್ಲಿ ನಿರ್ಮಿಸಲಾಗಿರುವ ಅತ್ಯಾಧುನಿಕ ಘನ ತ್ಯಾಜ್ಯ ನಿರ್ವಹಣಾ ಕಲಿಕಾ ಕೇಂದ್ರ ಹಾಗೂ ವಿವಿಧ ತ್ಯಾಜ್ಯ ಸಂಸ್ಕರಣಾ ಘಟಕಗಳಿಗೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಚಾಲನೆ ನೀಡಿದರು.

ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಮಾತನಾಡಿ, ಘನ ತ್ಯಾಜ್ಯ ನಿರ್ವಹಣಾ ನಿಯಮಗಳು-2026ರ ಅಡಿಯಲ್ಲಿ ಸ್ಥಾಪಿಸಲಾಗಿರುವ ಕಲಿಕಾ ಕೇಂದ್ರವು 'ಕಸದಿಂದ ರಸ' ತತ್ವದಡಿ ಕಾರ್ಯನಿರ್ವಹಿಸಲಿದೆ. ವೈಜ್ಞಾನಿಕವಾಗಿ ತ್ಯಾಜ್ಯ ನಿರ್ವಹಣೆ, ಕಸ ವಿಂಗಡಣೆ ಹಾಗೂ ಮರುಬಳಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಕೇಂದ್ರದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಶಾಲಾ-ಕಾಲೇಜು ವಿದ್ಯಾರ್ಥಿಗಳು, ಅಪಾರ್ಟ್‌ಮೆಂಟ್ ನಿವಾಸಿಗಳು, ವಾಣಿಜ್ಯ ಸಂಸ್ಥೆಗಳ ಸಿಬ್ಬಂದಿ ಹಾಗೂ ಪಾಲಿಕೆ ಪೌರಕಾರ್ಮಿಕರಿಗೆ ತಜ್ಞರಿಂದ ಪ್ರಾಯೋಗಿಕ ತರಬೇತಿ ನೀಡಲಾಗುವುದು. ಈ ಕಾರ್ಯಕ್ಕೆ ಆರ್‌ವಿ ಶಿಕ್ಷಣ ಸಂಸ್ಥೆ ಸೇರಿದಂತೆ ಹಲವು ಶಿಕ್ಷಣ ಸಂಸ್ಥೆಗಳು ಸಹಕಾರ ನೀಡುತ್ತಿವೆ ಎಂದರು. ಕೇಂದ್ರದ ಆವರಣದಲ್ಲಿ ಪ್ರತಿದಿನ 13 ಟನ್ ಹಸಿ ಕಸ ಸಂಸ್ಕರಿಸುವ ಸಾಮರ್ಥ್ಯದ ಬಯೋ-ಮಿಥನೈಸೇಷನ್ ಘಟಕ ಸ್ಥಾಪಿಸಲಾಗಿದೆ. ತ್ಯಾಜ್ಯದಿಂದ ಉತ್ಪಾದನೆಯಾಗುವ ಬಯೋಗ್ಯಾಸ್ ಅನ್ನು ಸುತ್ತಮುತ್ತಲಿನ ಹೋಟೆಲ್‌ಗಳಿಗೆ ಇಂಧನವಾಗಿ ಪೂರೈಸಲಾಗುತ್ತಿದೆ. ತ್ಯಾಜ್ಯ ಸಾಗಣೆ ಹಾಗೂ ನಿರ್ವಹಣೆಯನ್ನು ಸುಗಮಗೊಳಿಸಲು 25 ಟನ್ ಸಾಮರ್ಥ್ಯದ ಮಿನಿ ಟ್ರಾನ್ಸ್‌ಫರ್ ಸ್ಟೇಷನ್‌ಗಳನ್ನೂ ಸ್ಥಾಪಿಸಲಾಗಿದೆ ಎಂದು ಅವರು ವಿವರಿಸಿದರು.ಗಾರ್ಮೆಂಟ್ಸ್ ಹಾಗೂ ಟೈಲರಿಂಗ್ ಅಂಗಡಿಗಳಿಂದ ಹೊರಬರುವ ಬಟ್ಟೆ ಚಿಂದಿಗಳನ್ನು ಮರುಬಳಕೆ ಮಾಡಿ ಬ್ಯಾಗ್, ವ್ಯಾಲೆಟ್, ಬೆಡ್‌ಶೀಟ್ ಸೇರಿದಂತೆ ವಿವಿಧ ಉತ್ಪನ್ನಗಳನ್ನು ತಯಾರಿಸುವ ಜವಳಿ ಮರುಬಳಕೆ ಘಟಕಕ್ಕೂ ಚಾಲನೆ ನೀಡಲಾಗಿದೆ. ಇದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಗರದಲ್ಲಿ ತ್ಯಾಜ್ಯವಾಗಿ



ಬಿಸಾಡಲಾಗುತ್ತಿದ್ದ ಥರ್ಮಾಕೋಲ್ ಅನ್ನು ಕರಗಿಸಿ ಗಟ್ಟಿ ಪದಾರ್ಥವನ್ನಾಗಿ ಪರಿವರ್ತಿಸಿ ದೆಹಲಿಗೆ ಕಳುಹಿಸಲಾಗುತ್ತಿದೆ. ಅಲ್ಲಿ ಫೋಟೋ ಫ್ರೇಮ್, ಕಿವಿಯೋಲೆ ಸೇರಿದಂತೆ ವಿವಿಧ ವಸ್ತುಗಳನ್ನು ತಯಾರಿಸಲಾಗುತ್ತಿದೆ. ನಿರುಪಯುಕ್ತ ಹಾಸಿಗೆಗಳನ್ನು ನಾರುಗಳಾಗಿ ಪರಿವರ್ತಿಸಿ ಮರುಬಳಕೆ ಮಾಡುವ ವ್ಯವಸ್ಥೆಯನ್ನೂ ಕೇಂದ್ರದಲ್ಲಿ ಕಲ್ಪಿಸಲಾಗಿದೆ.

**ಮನೆ ಬಾಗಿಲಲ್ಲೇ ಬಲ್ಕ್ ವೇಸ್ಟ್ ಸಂಗ್ರಹ**

ಬಿ.ಟಿ.ಎಂ. ಲೇಔಟ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಮನೆಗಳಲ್ಲಿ ಬಳಕೆಯಾಗದೆ ಇರುವ ಹಳೆಯ ಸೋಫಾ, ಮಂಚ, ಮೇಜು ಸೇರಿದಂತೆ ಭಾರೀ ಗಾತ್ರದ ತ್ಯಾಜ್ಯವನ್ನು ಮನೆ ಬಾಗಿಲಲ್ಲೇ ಸಂಗ್ರಹಿಸುವ ವ್ಯವಸ್ಥೆಯನ್ನೂ ಆರಂಭಿಸಲಾಗಿದೆ. ಈ ಸಂದರ್ಭದಲ್ಲಿ ಎಜಿಎಂ ಶಶಿಕಲಾ, ಬಿಬಿಎಂಪಿ ಮಾಜಿ ಸದಸ್ಯ ಚಂದ್ರಪ್ಪ, ಆರ್‌ಡಬ್ಲ್ಯುಎ ಪ್ರತಿನಿಧಿಗಳು ಹಾಗೂ ಜಿಬಿಎ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿಎಂಐಸಿ ಯೋಜನೆ ಹಗರಣ ಅಂತಿಮ ಘಟ್ಟ ತಲುಪುವವರೆಗೆ ಹೋರಾಟ : ದೇವೇಗೌಡರ ಎಚ್ಚರಿಕೆ

ಬೆಂಗಳೂರು: ಬೆಂಗಳೂರು-ಮೈಸೂರು ಮೂಲಸೌಕರ್ಯ ಕಾರಿಡಾರ್ (ಬಿಎಂಐಸಿ) ಯೋಜನೆಯ ಅನುಷ್ಠಾನದಲ್ಲಿ ದೊಡ್ಡ ಹಗರಣ ನಡೆದಿದ್ದು, ಈ ವಿಚಾರದಲ್ಲಿ ಅಂತಿಮ ಘಟ್ಟ ತಲುಪುವವರೆಗೆ ಹೋರಾಟ ನಡೆಸುವುದಾಗಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಗುಡುಗಿದರು.

ಜೆ.ಪಿ. ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಎಂಐಸಿ ಯೋಜನೆಗಾಗಿ ಭೂಮಿ ಕಳೆದುಕೊಂಡ ರೈತರಿಗೆ ನಿವೇಶನ ನೀಡುವ ಕುರಿತು ಸಚಿವ ಸಂಪುಟ ಕೈಗೊಂಡಿರುವ ನಿರ್ಧಾರದ ಬಗ್ಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಬರೆದಿರುವ ಬಹಿರಂಗ ಪತ್ರವನ್ನು ಬಿಡುಗಡೆ ಮಾಡಿದರು. ರೈತರಿಗೆ ನ್ಯಾಯ ಒದಗಿಸಲು ಜೆಡಿಎಸ್ ಶಕ್ತಿ ಮೀರಿ ಹೋರಾಟ ನಡೆಸಲಿದೆ. ಈ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ನೈಸ್ ಸಂಸ್ಥೆಯನ್ನು ಸರ್ಕಾರದ ವಶಕ್ಕೆ ಪಡೆಯಲು ಹಲವರು ಪ್ರಯತ್ನಿಸಿದ್ದಾರೆ. ಆದರೆ, ಮೂಲ ಒಪ್ಪಂದದಂತೆ ಯೋಜನೆ ಅನುಷ್ಠಾನಗೊಳಿಸಬೇಕು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿರುವ ಹಿನ್ನೆಲೆಯಲ್ಲಿ ಅದು ಸಾಧ್ಯವಾಗಿಲ್ಲ ಎಂದು ಹೇಳಿದರು.

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೈಸ್ ಸಂಸ್ಥೆಯನ್ನು ಟೇಕ್‌ಓವರ್ ಮಾಡುತ್ತಿದ್ದಾರೆ ಎಂದು ತಮ್ಮ ಬಳಿಯಿರುವ ದಾಖಲೆಗಳ ಆಧಾರದ ಮೇಲೆ ಹೇಳಿರಬಹುದು. ನನ್ನ ಬಳಿಯೂ ಸಾಕಷ್ಟು ಪುರಾವೆಗಳಿವೆ. ನ್ಯಾಯಾಲಯದ ತೀರ್ಪುಗಳನ್ನು ಆಧರಿಸಿ ಮುಖ್ಯಮಂತ್ರಿಗೆ ಬಹಿರಂಗ ಪತ್ರ ಬರೆದಿದ್ದೇನೆ.



ಮೂರು-ನಾಲ್ಕು ದಿನ ಕಾದು ಸರ್ಕಾರದ ಪ್ರತಿಕ್ರಿಯೆ ನೋಡುತ್ತೇನೆ. ಬಳಿಕ ಪಕ್ಷದ ಮುಂದಿನ ಹೋರಾಟದ ರೂಪುರೇಷೆ ನಿರ್ಧರಿಸಲಾಗುವುದು ಎಂದರು.

**ನಿವೇಶನ ಹಂಚಿಕೆ ಕುರಿತು ಪ್ರಶ್ನೆಗಳ ಸರಮಾಲೆ**

ಬಿಎಂಐಸಿ ಯೋಜನೆಗಾಗಿ ಭೂಮಿ ಕಳೆದುಕೊಂಡವರಿಗೆ 1,453 ನಿವೇಶನಗಳನ್ನು ಹಂಚಿಕೆ ಮಾಡಲು ನೈಸ್ ಸಂಸ್ಥೆಗೆ ನಿರ್ದೇಶನ ನೀಡಲಾಗಿದೆ ಹಾಗೂ ಇದಕ್ಕೆ ಸುಪ್ರೀಂಕೋರ್ಟ್ ತೀರ್ಪಿನ ಅನುಮೋದನೆ ಇದೆ ಎಂದು ಸರ್ಕಾರ ನಂಬಿರುವುದು ವ್ಯಾಪಕವಾಗಿ ವರದಿಯಾಗಿದೆ. ಆದರೆ, ಸಚಿವ ಸಂಪುಟದ ನಿರ್ಧಾರವು ಕಾನೂನು ಮತ್ತು ಈ ಹಿಂದಿನ ಸರ್ಕಾರದ ನಿಲುವಿಗೆ ವಿರುದ್ಧವಾಗಿದೆಯೇ ಎಂಬ ಪ್ರಶ್ನೆ ಉದ್ಭವಿಸಿದೆ ಎಂದು ದೇವೇಗೌಡರು ಹೇಳಿದರು. 2016ರಲ್ಲಿ ಜೆಡಿಎಸ್ ಅಧಿಕಾರದಲ್ಲಿದ್ದಾಗ ಸರ್ಕಾರವೇ ಸುಪ್ರೀಂಕೋರ್ಟ್‌ನಲ್ಲಿ ನ್ಯಾಯಾಂಗ ನಿಂದನೆ ಪ್ರಕ್ರಿಯೆಯ ವೇಳೆ ಎರಡು ಪ್ರಮಾಣಪತ್ರಗಳನ್ನು ಸಲ್ಲಿಸಿತ್ತು. ಇಂಟರ್‌ಚೇಂಜ್‌ಗಳಲ್ಲಿ ನಿವೇಶನಗಳ ರಚನೆಗೆ ಅನುಮೋದನೆ ನೀಡುವುದು ಮೂಲ ಒಪ್ಪಂದಕ್ಕೆ ವಿರುದ್ಧವಾಗಿದೆ ಎಂದು ಆಗ ಸರ್ಕಾರ ತಿಳಿಸಿತ್ತು. ಹಾಗಿದ್ದರೆ ಇದೀಗ ಭೂಮಿ ಕಳೆದುಕೊಂಡವರಿಗೆ ನಿವೇಶನ ಹಂಚಿಕೆಗೆ ಸಚಿವ ಸಂಪುಟ ಅನುಮೋದನೆ ನೀಡಿರುವುದರ ಅರ್ಥವೇನು ಎಂದು ಪ್ರಶ್ನಿಸಿದರು. ಮಾದಾವರ, ಕೊಡಿಗೇಹಳ್ಳಿ, ಕೆಂಗೇರಿ, ಕೊಮ್ಮಘಟ್ಟ, ವರಾಹಸಂದ್ರ, ಸೋಂಪುರ, ಪಿಳ್ಳಗಾನಹಳ್ಳಿ, ಕೆಮತನಹಳ್ಳಿ, ಯು.ಎಂ. ಕಾವಲ್, ಚಿಕ್ಕತೋಗೂರು, ಪಂಥರಪಾಳ್ಯ, ಕೆ.ಜಿ. ಶ್ರೀಕಂಠಪುರ ಹಾಗೂ ಗಂಗೊಂಡನಹಳ್ಳಿ ಗ್ರಾಮಗಳಲ್ಲಿ ನಿವೇಶನ ಹಂಚಿಕೆ ಮಾಡಲಾಗುವುದು ಎಂದು ವರದಿಯಾಗಿದೆ. ಈ ಗ್ರಾಮಗಳಲ್ಲಿನ ಭೂಮಿ ಬಿಎಂಐಸಿ ರಸ್ತೆ ಹಾಗೂ ಮೂಲಸೌಕರ್ಯ ಘಟಕದ ವ್ಯಾಪ್ತಿಗೆ ಬರುತ್ತದೆ ಎಂಬುದು ಸಾರ್ವಜನಿಕ ದಾಖಲೆಗಳಲ್ಲಿ ಇದೆ ಎಂದು ಹೇಳಿದರು. ಹಂಚಿಕೆ ಮಾಡಬೇಕಿರುವ ನಿವೇಶನಗಳನ್ನು ಯಾವಾಗ ರಚಿಸಲಾಯಿತು ಅವುಗಳ ರಚನೆಗೆ ಅನುಮೋದನೆ ನೀಡಿದವರು ಯಾರು ಎಂಬುದಕ್ಕೆ ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು. ಜುಲೈ 2026ರಲ್ಲಿ ಹೈಕೋರ್ಟ್ ವಿಭಾಗೀಯ ಪೀಠವು ಕಂಪನಿಯ ಬ್ಯಾಲೆನ್ಸ್‌ಶೀಟ್‌ಗಳಲ್ಲಿ ಭೂಮಿ ಮಾರಾಟದ ಮುಂಗಡ ಹಾಗೂ ?36 ಕೋಟಿಯಿಂದ ?48 ಕೋಟಿವರೆಗಿನ ಜಂಟಿ ಅಭಿವೃದ್ಧಿ ಒಪ್ಪಂದಗಳ ವಿವರಗಳು ನಿರಂತರವಾಗಿ ಬಹಿರಂಗಗೊಂಡಿರುವುದನ್ನು ಗಮನಿಸಿದೆ ಎಂದು ದೇವೇಗೌಡರು ಹೇಳಿದರು.

**ಹೂಡಿಕೆದಾರರ ಹಿತಾಸಕ್ತಿಯೇ**

ಸಚಿವ ಸಂಪುಟದ ನಿರ್ಧಾರವು ಸುಪ್ರೀಂಕೋರ್ಟ್ ತೀರ್ಪು ಹಾಗೂ ಕಳೆದ ಒಂದು ದಶಕದಿಂದ ಸರ್ಕಾರ ಹೊಂದಿದ್ದ ನಿಲುವಿಗೆ ವಿರುದ್ಧವಾಗಿದೆಯೇ? ನಿವೇಶನಗಳ ನಿಜವಾದ ಫಲಾನುಭವಿಗಳು ಭೂಮಿ ಕಳೆದುಕೊಂಡ ರೈತರೇ ಅಥವಾ ನೈಸ್ ಸಂಸ್ಥೆ ಹಾಗೂ ಅದರ ಹೂಡಿಕೆದಾರರೇ? ಸಚಿವ ಸಂಪುಟದಲ್ಲಿ ನೈಸ್ ಹೂಡಿಕೆದಾರರ ಹಿತಾಸಕ್ತಿ ಹೊಂದಿರುವವರು ಯಾರಾದರೂ ಇದ್ದಾರೆಯೇ? ಮುಖ್ಯಮಂತ್ರಿಗಳು ಈ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ದೇವೇಗೌಡರು ಒತ್ತಾಯಿಸಿದರು.

ನಿವೇಶನ ಹಂಚಿಕೆಯ ಹೆಸರಿನಲ್ಲಿ ಬೆಲೆಬಾಳುವ ಭೂಮಿಯನ್ನು ಕಬಳಿಸುವ ಹುನ್ನಾರ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಬಿಎಂಐಸಿ ಯೋಜನೆ ಹಾಗೂ ಕಾವೇರಿ ನದಿ ನೀರು ಹಂಚಿಕೆ ವಿಚಾರಗಳನ್ನು ತಾಳೆ ಹಾಕಬಾರದು. ಎರಡೂ ಸಂಪೂರ್ಣ ಭಿನ್ನವಾದ ವಿಚಾರಗಳಾಗಿವೆ ಎಂದು ಸ್ಪಷ್ಟಪಡಿಸಿದರು.

# ಕಾಯುತ್ತಿದ್ದಾರೆ ನಿಮ್ಮವರು..,ನಿಮಗಾಗಿ

ವಯಸ್ಸಾದ ತಂದೆ ತಾಯಿ ಆ ಮನೆಯಲ್ಲಿ ಇಬ್ಬರೇ. ಮುಂಜಾನೆ ನಿತ್ಯ ಕರ್ಮಗಳನ್ನು ಪೂರೈಸಿ ವಾಕಿಂಗ್ ಹೋಗುವ ಅವರಿಬ್ಬರೂ ಮನೆಗೆ ಬಂದು ಜೊತೆಯಾಗಿಯೇ ಅಡುಗೆ ಮಾಡಿ ತಿಂಡಿಯ ಬದಲು ಊಟ ಮಾಡಿ ಬಿಡುತ್ತಾರೆ. ಆತ ಆಫೀಸಿಗೆ ಹೊರಟರೆ ಆಕೆ ಕಾಲು ಚಾಚಿಕೊಂಡು ಕುಳಿತು ಪೇಪರ್ ಓದುತ್ತಾಳೆ.

ಸ್ವಲ್ಪ ಹೊತ್ತಿನ ನಂತರ ಮನೆ ಕೆಲಸದಾಕೆ ಬಂದು ಇಡೀ ಮನೆಯ ಕಸಗುಡಿಸಿ ನೆಲ ಒರೆಸಿ, ಪಾತ್ರೆ ತೊಳೆದು ಹೋಗುವವರೆಗೂ ಆಕೆಯ ಹಿಂದೆ ಮುಂದೆ ಓಡಾಡಿ ಆಕೆಗೆ ಬೇಕಾದುದನ್ನು ಒದಗಿಸುವುದು ಮನೆಯ ಯಜಮಾನಿಯ ಕೆಲಸ. ಮಧ್ಯಾಹ್ನ ಆಕೆ ಬೇಕಾದರೆ ಒಂದಷ್ಟು ಊಟ ಮಾಡುತ್ತಾರೆ, ಇಲ್ಲವಾದರೆ ಒಂದು ಕಪ್ಪು ಚಹಾ ಮಾಡಿಕೊಂಡು ಕುಡಿದು ಒಂದು ಸಣ್ಣ ನಿದ್ದೆಯನ್ನು ತೆಗೆದು ಏಳುತ್ತಾಳೆ. ಸಂಜೆ ಗಂಡ ಮನೆಗೆ ಬರುವ ವೇಳೆಗೆ ಕಸ ಗುಡಿಸುವ ಆಕೆ ತಲೆ ಬಾಚಿಕೊಂಡು ಕೈ ಕಾಲು ಮುಖ ತೊಳೆದು ದೇವರಿಗೆ ದೀಪ ಮುಡಿಸಿ ಕಾಫಿ ಡಿಕಾಕ್ಷನ್ ಹಾಕಿಡುತ್ತಾರೆ. ಪತಿ ಮನೆಗೆ ಬಂದ ಕೂಡಲೇ ಕೈ ಕಾಲು ಮುಖ ತೊಳೆದು ಏನಾದರೂ ಕುರುಕಲು ತಿಂಡಿಯನ್ನು ಎರಡು ತಟ್ಟೆಗೆ ಹಾಕಿ ತರುತ್ತಾಳೆ. ಇಬ್ಬರೂ ತಿಂಡಿ ತಿಂದು ಕಾಫಿ ಕುಡಿದು ಜೊತೆಯಾಗಿ ತರಕಾರಿ, ದಿನಸಿ ಸಾಮಾನುಗಳನ್ನು ತರಲು ಹೊರಗೆ ಹೋಗುತ್ತಾರೆ. ಮರಳಿ ಬಂದ ನಂತರ ಆಕೆ ಅಡುಗೆ ಮಾಡಿದರೆ ಆತ ಅಂದಿನ ದಿನಪತ್ರಿಕೆಯ ಮೇಲೆ ಕಣ್ಣಾಡಿಸುತ್ತಾರೆ.

ಅಡುಗೆ ಮುಗಿದು ಊಟ ಮಾಡುವ ಹೊತ್ತಿಗೆ ಅವರಿಗೆ ಮಕ್ಕಳ ಫೋನ್ ಬರುತ್ತದೆ. ಅವರೊಂದಿಗೆ ಮಾತನಾಡಿ ಮನೆಯ ಬಾಗಿಲನ್ನು ಭದ್ರ ಪಡಿಸಿ ಅವರಿಬ್ಬರೂ ನಿದ್ರೆಗೆ ಜಾರುತ್ತಾರೆ. ಎಷ್ಟು ಚೆನ್ನಾಗಿದೆ ಅವರಿಬ್ಬರ ಸಂಸಾರ ಎಂದು ಅನ್ನಿಸುತ್ತದೆ ಅಲ್ಲವೇ ನಿಜ.... ಜೀವನದ ಸಂಧ್ಯಾಕಾಲದಲ್ಲಿ ಹೀಗೆ ಜೊತೆಯಾಗಿ ಓಡಾಡುವ ಒಬ್ಬರಿಗೊಬ್ಬರು ಆಸರೆಯಾಗಿ ನಿಲ್ಲುವ ಆ ದಂಪತಿಗಳಿಗೆ ಒಳಗೊಳಗೆ ಕೊರೆಯುವ ಒಂದು ನೋವಿನ ಸಂಗತಿಯೆಂದರೆ ಹೇಳಿಕೊಳ್ಳಲು ಮೂರು ಜನ ಮಕ್ಕಳಿದ್ದರೂ ಒಬ್ಬರು ಕೂಡ ತಮ್ಮ ಬಳಿ ಇಲ್ಲ ಎಂಬುದು.

ಇನ್ನು ಹಳ್ಳಿಯಲ್ಲಿರುವ ಬಹುತೇಕ ಎಲ್ಲ ಮನೆಗಳಲ್ಲಿಯೂ ಇದೇ ಹಾಡು



ಇದೇ ಪಾಡು. ತಮ್ಮ ರೈತಾಪಿ ಬದುಕಿನ ಕಷ್ಟಗಳು ತಮ್ಮ ಮಕ್ಕಳನ್ನು ಬಾಧಿಸದಿರಲಿ ಎಂಬ ಅಪೇಕ್ಷೆಯಿಂದ ಮಕ್ಕಳ ಹೆಚ್ಚಿನ ವಿದ್ಯಾಭ್ಯಾಸಕ್ಕೆ ಒತ್ತು ಕೊಟ್ಟು ಅವರನ್ನು ಓದಿಸಿ ವಿದ್ಯಾವಂತರನ್ನಾಗಿಸಿ ತಮ್ಮ ಕಾಲ ಮೇಲೆ ತಾವು ನಿಲ್ಲುವಂತೆ ಮಾಡಿರುವ ಪಾಲಕರಿಗೆ ಒಂಟಿತನದ ಬಾಧೆ ಕಾಡುತ್ತದೆ. ಯಾವಾಗಲೋ ಒಮ್ಮೆ ತಮಗೆ ರಜೆ ಸಿಕ್ಕಾಗ ಬಂದು ಹೋಗುವ ಮಕ್ಕಳ ದಾರಿ ಕಾಯುವುದಷ್ಟೇ ಅವರ ಕೆಲಸವಾಗಿದೆ. ಆಗಾಗ ಹಬ್ಬ,ಹುಣ್ಣಿಮೆಗಳಿಗೆ ಬರುತ್ತಿದ್ದ ಮಕ್ಕಳು ಇದೀಗ ಮದುವೆಯಾಗಿ ತಮ್ಮದೇ ಸಂಸಾರ, ಮನೆ,ಮಕ್ಕಳು ಎಂದು ವ್ಯಸ್ತರಾಗಿರುವಾಗ ಊರಿಗೆ ಬರುವುದಾದರೂ ಹೇಗೆ ಒಂದು ಗಳಿಗೆ ಯಾರ ಆರೋಗ್ಯದಲ್ಲಿ ವ್ಯತ್ಯಾಸವಾದರೂ ದಂಪತಿಗಳಿಗೆ ಭಯ. ತಮಗೇನಾದರೂ ಆದರೆ ಮುಂದೆ ಹೇಗೆ ಎಂಬ ಆತಂಕ ಈ ಹಿಂದೆ ಹಬ್ಬ ಹುಣ್ಣಿಮೆಗಳಲ್ಲಿ ಮಾಡುತ್ತಿದ್ದ ಅಡುಗೆಯಲ್ಲಿ ಶೇಕಡ 50ರಷ್ಟು ಕಡಿತ. ಆಕೆಗೆ ಇತ್ತೀಚೆಗೆ ರಕ್ತದೊತ್ತಡ ಮತ್ತು ಯಜಮಾನನಿಗೆ ಮಧುಮೇಹ ಮತ್ತು ರಕ್ತದೊತ್ತಡ ಎರಡೂ ಒಟ್ಟೊಟ್ಟಿಗೆ ಬಂದಿವೆ. ಹಾಗಾಗಿ ಊಟ ತಿಂಡಿಗಳಲ್ಲಿ ಇಬ್ಬರು ಕಟ್ಟುನಿಟ್ಟು ಬಾಯಿ ಚಪಲ ಇಲ್ಲವೆಂದಿಲ್ಲ ಆದರೆ ಏನನ್ನಾದರೂ ಹೆಚ್ಚು ಕಮ್ಮಿ ತಿಂದು ಆರೋಗ್ಯ ತಪ್ಪಿದ್ದರೆ ನೋಡಿಕೊಳ್ಳುವವರು ಯಾರು ಎಂಬ ಭಯ.

ಈ ಹಿಂದೆ ತುಂಬಿದ ಮನೆಯಲ್ಲಿ ಗಂಡ ಕಚೇರಿ ಕೆಲಸ ಮಕ್ಕಳ ಪಾಠ ಪ್ರವಚನ ಎಂದು ಆಸಕ್ತಿ ವಹಿಸಿದರೆ ಹೆಂಡತಿ ಮಕ್ಕಳ ಅಡುಗೆ ಊಟ ತಿಂಡಿ ಅವರ ಶಾಲೆಯ ಮತ್ತು ಮನೆಯ ಎಲ್ಲಾ ಪಾಠ ಪ್ರವಚನಗಳ ಊಟ ತಿಂಡಿಯ ಕಾಳಜಿ ವಹಿಸುತ್ತಿದ್ದರು.

ತುಂಬಿದ ಕುಟುಂಬದಲ್ಲಿ ಮಕ್ಕಳ ಕಾಳಜಿ ಮಾಡಲು ಅಜ್ಜ ಅಜ್ಜಿ ಇರುತ್ತಿದ್ದರು. ಮಕ್ಕಳನ್ನು ದೇವಸ್ಥಾನಗಳಿಗೆ ಕರೆದೊಯ್ಯುವ ನಮ್ಮ ಸಂಪ್ರದಾಯ ರೀತಿ ನೀತಿಗಳನ್ನು ಹೇಳದೆಯೇ ತಮ್ಮ ಕೃತಿಯಿಂದಲೇ ತೋರಿಸುವ ಅಜ್ಜ ಅಜ್ಜಿಯರನ್ನು ಮೊಮ್ಮಕ್ಕಳು ತಮಗೇ ಅರಿವಿಲ್ಲದೆ ಅನುಸರಿಸುತ್ತಿದ್ದರು.

ಇನ್ನು ಮಕ್ಕಳನ್ನು ತಂದೆ ಇಲ್ಲವೇ ತಾಯಿ ಗದರಿಸಿದರೆ ಅವರನ್ನು ಪಾಲಕರ ವೈಗುಳಗಳಿಂದ, ಹೊಡೆತಗಳಿಂದ ರಕ್ಷಿಸಲು ಮುದ್ದು ಮಾಡುತ್ತಲೇ, ಬುದ್ಧಿ ಹೇಳುವ ಚಿಕ್ಕಪ್ಪ ಚಿಕ್ಕಮ್ಮಂದಿರು ಇರುತ್ತಿದ್ದರು.

ಬದಲಾದ ಕಾಲಘಟ್ಟದಲ್ಲಿ ಕುಟುಂಬಗಳು ವಿಘಟನೆಗೊಂಡು ಗಂಡ ಹೆಂಡತಿ ಮತ್ತು ಮಕ್ಕಳು ಮಾತ್ರ ಮನೆಯಲ್ಲಿ ಇರುವಂತಹ ಪರಿಸ್ಥಿತಿ ಏರ್ಪಟ್ಟಿದ್ದು ಎಲ್ಲರೂ ತಮ್ಮ ಮಕ್ಕಳು ಉನ್ನತ ಶಿಕ್ಷಣವನ್ನು ಗಳಿಸಿ ಒಳ್ಳೆಯ ಉದ್ಯೋಗವನ್ನು ಪಡೆದು ಬದುಕಿನಲ್ಲಿ ಮುನ್ನಡೆಯಲಿ ಎಂಬ ಆಶಯವನ್ನು ಹೊಂದಿದ್ದಾರೆ ಎಲ್ಲವೂ ಸರಿಯೇ ಆದರೆ ಮೇಲೆ ಏರುವ ಉನ್ನತ ಸ್ಥಿತಿಯನ್ನು ಪಡೆಯುವ ನಿಟ್ಟಿನಲ್ಲಿ ನಮ್ಮವರನ್ನೇ ನಾವು ಕಳೆದುಕೊಳ್ಳುವುದು ಎಷ್ಟರಮಟ್ಟಿಗೆ ನ್ಯಾಯ?

ಉನ್ನತ ವಿದ್ಯಾಭ್ಯಾಸ, ಒಳ್ಳೆಯ ನೌಕರಿ, ಓಡಾಡಲು ಕಾರು, ಕಂತಿನಲ್ಲಿ ಕೊಂಡ ಫ್ಲ್ಯಾಟ್ಗಳಲ್ಲಿ ವಾಸ ವಾರದ ಐದು ದಿನ ಬಿಡುವಿಲ್ಲದ ಸತತ ದುಡಿಮೆಯ ನಂತರ ವಾರಾಂತ್ಯಗಳಲ್ಲಿ ಹೆಂಡತಿ ಮಕ್ಕಳೊಂದಿಗೆ ಹೊರಗಿನ ಸುತ್ತಾಟ, ಕೈಬೀಸಿ ಕರೆಯುವ ಮಾಲ್ಗಳು, ಚಿತ್ತಾಕರ್ಷಕ ಬಟ್ಟೆ ಬರೆಗಳನ್ನು, ಒಡವೆ ವಸ್ತುಗಳನ್ನು ಖರೀದಿಸಿ ಎಂದು ಹೇಳುವ ಜಾಹಿರಾತುಗಳು ಎಲ್ಲವೂ ಕೆಲ ವರ್ಷಗಳವರೆಗೆ ಚೆನ್ನಾಗಿಯೇ ಇರುತ್ತದೆ. ಮುಂದೆ ಅವರ ಮಕ್ಕಳು ದೊಡ್ಡವರಾಗಿ ವಿದ್ಯಾಭ್ಯಾಸದ ನೆಪದಲ್ಲಿ ಗೂಡು ಬಿಟ್ಟ ಹಕ್ಕಿಯಂತೆ ಹಾರಿ ಹೋದಾಗ ಇವರಿಗೆ ಒಂಟಿತನ ಭಾಸವಾಗುತ್ತದೆ. ಈ ಹಿಂದೆ ಆಸೆಪಟ್ಟು ಕೊಂಡಿದ್ದ ಫ್ಲಾಟುಗಳು ಕೋಳಿಗೂಡಿನಂತೆ ಉಸಿರುಗಟ್ಟಿಸುವಂತೆ ಭಾಸವಾಗುತ್ತವೆ.

ಮತ್ತದೇ ಸಂಜೆ ಅದೇ ಏಕಾಂತ ಎಂದು ನಿಡುಸುಯ್ಯುವ ಅವರುಗಳಿಗೆ ಇದೀಗ ತಮ್ಮ ಪಾಲಕರು ಅನುಭವಿಸಿರಬಹುದಾದ ಯಾತನೆಗಳ ಅರಿವಾಗುತ್ತದೆ. ಆದರೇನು ಪ್ರಯೋಜನ ಮಿಂಚಿಹೋದ ಕಾಲಕ್ಕೆ ಚಿಂತಿಸಿ ಫಲವೇನು ನೋಡಿದಿರಾ ಸ್ನೇಹಿತರೆ! ಈ ಪರಿಸ್ಥಿತಿ ಯಾವ ತಂದೆ ತಾಯಿಗಳಿಗೂ ಬರಬಾರದು. ಕೇವಲ ಎರಡು ತಲೆಮಾರುಗಳಿಂದ ಈ ರೀತಿ ಯಾತೊಂದರೆಗಳನ್ನು ನಾವು ಕಾಣುತ್ತಿದ್ದೇವೆ. ಅದಕ್ಕೂ ಮುನ್ನ ಜನರು ತಾವು ಇರುವ ಸ್ಥಳಗಳಲ್ಲಿಯೇ ತಮ್ಮ ಕುಟುಂಬ ಪರಿವಾರದ ಸದಸ್ಯರೊಡನೆ ಹೊಂದಿಕೊಂಡು ಒಂದೇ ಸೂರಿನಡಿ ಕಷ್ಟ ಸುಖಗಳನ್ನು ಹಂಚಿಕೊಂಡು ಬದುಕುತ್ತಿದ್ದರು. ಒಕ್ಕಲುತನ ಪ್ರಧಾನವಾದ ಬದುಕಿನಲ್ಲಿ ಕೃಷಿ ಕೆಲಸಕ್ಕೆ, ಅದಕ್ಕೆ ಸಂಬಂಧಿಸಿದ ಉಳಿದೆಲ್ಲ ಗುಡಿ ಕೈಗಾರಿಕೆಗಳಾದ ಕುಂಬಾರ, ಬಡಿಗ, ಕಮ್ಮಾರ, ಅಕ್ಕಸಾಲಿಗ ನೀರು ಗಂಟಿ ಹೀಗೆ ಹತ್ತು ಹಲವು ಕೆಲಸಗಳನ್ನು ಮಾಡುವವರು ಕೂಡ ರೈತರಿಗೆ ಜೊತೆಯಾಗಿ ತಮ್ಮ ಕೆಲಸ ಕಾರ್ಯಗಳನ್ನು ಮಾಡುತ್ತಾ ಹಳ್ಳಿಗಳಲ್ಲಿ ಬದುಕುತ್ತಿದ್ದರು. ಆದರೆ ಎಲ್ಲಾ ಕೆಲಸಗಳನ್ನು ಯಂತ್ರಗಳೇ ನಿರ್ವಹಿಸುವಂತಹ ಪರಿಸ್ಥಿತಿ ಒದಗಿ ಬಂದಾಗ ಬಹಳಷ್ಟು ಜನ ನಿರುದ್ಯೋಗಿಗಳಾದರು. ಕೆಲವರು ತಮ್ಮ ಹಳೆಯ ಉದ್ಯೋಗಗಳಲ್ಲಿ ಮುಂದುವರೆದರು ಕೂಡ ಅವರಿಗೆ ಜೀವನವನ್ನು ನಿರ್ವಹಿಸಲು ಸಾಧ್ಯವಾಗುವಷ್ಟು ವರಮಾನ ದೊರೆಯದೆ ಹೋಯಿತು. ಪರಿಣಾಮವಾಗಿ ಜನರು ಉದ್ಯೋಗವನ್ನು ಅರಸಿ ಗುಳೆ ಹೋಗಲು ಆರಂಭಿಸಿದರು. ಕೈಗಾರೀಕರಣಗಳಿಂದ ಗುಡಿ ಕೈಗಾರಿಕೆಗಳು ಸಂಪೂರ್ಣವಾಗಿ ಮುಚ್ಚಿ ಹೋಗಿ ರೈತನು ಕೂಡ ತನ್ನ ಬೆಳೆಗೆ ಸರಿಯಾದ ಬೆಲೆಯನ್ನು ಪಡೆಯಲಾಗದೆ ಒಕ್ಕಲುತನದಿಂದ ವಿಮುಖನಾದನು.

ಇದು ಸಮಸ್ಯೆಯ ಒಂದು ಮುಖವಾದರೆ ಆಧುನೀಕರಣದ ಭರದಲ್ಲಿ ಜನರು ಹೆಚ್ಚಿನ ಶಿಕ್ಷಣ, ಉದ್ಯೋಗಾವಕಾಶಗಳನ್ನು ಹುಡುಕಿ ಹಳ್ಳಿಯಿಂದ ಪಟ್ಟಣಗಳತ್ತ ಮುಖ ಮಾಡಿದರು. ಚಂದದ ಬದುಕಿನ ಆಶಯ ಅವರನ್ನು ತಮ್ಮ ಮೂಲದಿಂದ ಕಿತ್ತು ಬೇರೆಡೆ ಬದುಕು ನಡೆಸಲು ಅನಿವಾರ್ಯವಾಯಿತು. ಕುಟುಂಬಗಳು ಹೆಚ್ಚಿನ ಖಾಸಗಿತನವನ್ನು ಅಪೇಕ್ಷಿಸಿ ವಿಭಕ್ತ ಕುಟುಂಬಗಳಾಗಿ ಒಡೆದು ಹೋದವು. ಇದೀಗ ಪರಿಸ್ಥಿತಿ ವಿಪರೀತಕ್ಕೆ ಹೋಗಿದ್ದು ಪಾಲಕರು ಮತ್ತು ಮಕ್ಕಳು ಬೇರೆ ಊರಲ್ಲಿ ಇದ್ದು ಬೇರೆ ಮನೆಗಳಲ್ಲಿ ವಾಸಿಸುತ್ತಿರುವುದಕ್ಕಿಂತ ಹೆಚ್ಚಾಗಿ ಒಂದೇ ಊರಿನ ಎರಡು ವಿಭಿನ್ನ ಬಡಾವಣೆಗಳಲ್ಲಿ ಮನೆ ಮಾಡಿಕೊಂಡು ಬದುಕುವ ಪರಿಸ್ಥಿತಿ. ಇದೊಂದು ರೀತಿಯ ಅತಂತ್ರ ಜೀವನ. ನಮ್ಮವರೊಂದಿಗೆ ಒಡನಾಡುವ ನಮ್ಮ ಪ್ರೀತಿ ವಿಶ್ವಾಸಗಳನ್ನು ಹಂಚಿಕೊಳ್ಳುವ, ಬದುಕಿನ ಎಲ್ಲ ಏರಿಳಿತಗಳನ್ನು ಜೊತೆಯಾಗಿ ಅನುಭವಿಸುವ ಜನರು ಈಗ ಕಾಣೆಯಾಗಿದ್ದಾರೆ.

ಪ್ರತಿ ಹಳ್ಳಿ ಮತ್ತು ಪುಟ್ಟ ಪಟ್ಟಣಗಳಲ್ಲಿನ ಜನರು ಉನ್ನತ ವಿದ್ಯಾಭ್ಯಾಸ ನೌಕರಿ ಎಂದು ಪರಸ್ಪರ ದೂರವಾಗಿದ್ದಾರೆ. ವಯಸ್ಸಾದ, ಮಾಗಿದ ಜೀವಿಗಳು ಮಾತ್ರ ಹಳ್ಳಿಯ ತಮ್ಮ ಮನೆಗಳ ಅಂಗಳದಲ್ಲಿ ಕುಳಿತುಕೊಂಡು ಈಗಾಗಲೇ ಮಸುಕಾಗಿರುವ ಕಣ್ಣುಗಳನ್ನು ಮತ್ತಷ್ಟು ಕಿರಿದಾಗಿಸಿಕೊಂಡು ಹಣೆಗೆ ಕೈ ಹಚ್ಚಿ ಕಾಯುತ್ತಿದ್ದಾರೆ ತಮ್ಮ ಮಕ್ಕಳ ಬರವಿಗಾಗಿ.



ವೀಣಾ ಹೇಮಂತ್ ಗೌಡ ಪಾಟೀಲ್

# ದಾಳಿಂಬೆ ಹಣ್ಣು ಆರೋಗ್ಯದ ಅಮೃತಭಂಡಾರ

ಪ್ರಕೃತಿಯು ಮನುಷ್ಯನಿಗೆ ನೀಡಿರುವ ಅಮೂಲ್ಯ ಕೊಡುಗೆಗಳಲ್ಲಿ ಹಣ್ಣುಗಳಿಗೆ ವಿಶೇಷ ಸ್ಥಾನವಿದೆ. ಬಣ್ಣ, ರುಚಿ ಮತ್ತು ಸುವಾಸನೆಯ ಜೊತೆಗೆ ದೇಹಕ್ಕೆ ಅಗತ್ಯವಾದ ಹಲವು ಪೋಷಕಾಂಶಗಳನ್ನು ನೀಡುವ ಹಣ್ಣುಗಳ ಸಾಲಿನಲ್ಲಿ ದಾಳಿಂಬೆ ಪ್ರಮುಖವಾದುದು. ಹೊರಗಿನಿಂದ ಗಟ್ಟಿಯಾದ ಕೆಂಪು ಅಥವಾ ಕಂದುಬಣ್ಣದ ಸಿಪ್ಪೆಯನ್ನು ಹೊಂದಿರುವ ದಾಳಿಂಬೆಯ ಒಳಭಾಗದಲ್ಲಿ ನೂರಾರು ಮುತ್ತಿನಂತಿರುವ ಕೆಂಪು ಕಾಳುಗಳು ಅಡಗಿರುತ್ತವೆ. ಪ್ರತಿಯೊಂದು ಕಾಳೂ ರಸದಿಂದ ತುಂಬಿದ್ದು, ಸಿಹಿ-ಹುಳಿ ರುಚಿಯ ಮೂಲಕ ಎಲ್ಲರನ್ನೂ ಆಕರ್ಷಿಸುತ್ತದೆ.

ದಾಳಿಂಬೆಯನ್ನು ಕೇವಲ ರುಚಿಕರ ಹಣ್ಣು ಎಂದು ನೋಡುವುದಕ್ಕಿಂತ, ಪೌಷ್ಟಿಕಾಂಶಗಳಿಂದ ಸಮೃದ್ಧವಾಗಿರುವ ಹಣ್ಣಾಗಿ ಪರಿಗಣಿಸಬಹುದು. ಇದರಲ್ಲಿ ನೀರು, ನೈಸರ್ಗಿಕ ಸಕ್ಕರೆ, ನಾರಿನಾಂಶ, ವಿಟಮಿನ್‌ಗಳು, ಖನಿಜಾಂಶಗಳು ಹಾಗೂ ವಿವಿಧ ಸಸ್ಯಜನ್ಯ ಸಂಯುಕ್ತಗಳು ಕಂಡುಬರುತ್ತವೆ. ವಿಶೇಷವಾಗಿ ದಾಳಿಂಬೆಯಲ್ಲಿ ಇರುವ ಪಾಲಿಫಿನಾಲ್‌ಗಳಂತಹ ಉತ್ಕರ್ಷಣ ನಿರೋಧಕ ಸಂಯುಕ್ತಗಳು ಇದರ ಪೌಷ್ಟಿಕ ಮಹತ್ವವನ್ನು ಹೆಚ್ಚಿಸುತ್ತವೆ.

**ದಾಳಿಂಬೆಯ ವೈಶಿಷ್ಟ್ಯವೇನು**

ದಾಳಿಂಬೆಯ ಹೊರಗಿನ ಸಿಪ್ಪೆ ಗಟ್ಟಿಯಾಗಿದ್ದರೂ ಒಳಗೆ ಮುತ್ತಿನಂತೆ ಕಾಣುವ ಕಾಳುಗಳ ಸಮೃದ್ಧಿ ಇರುತ್ತದೆ. ಕೆಂಪು ಬಣ್ಣದ ಕಾಳುಗಳು ರಸಪೂರ್ಣವಾಗಿದ್ದು, ನೇರವಾಗಿ ತಿನ್ನಬಹುದು. ದಾಳಿಂಬೆ ಕಾಳುಗಳನ್ನು ಹಣ್ಣಿನ ರೂಪದಲ್ಲಷ್ಟೇ ಅಲ್ಲದೆ ಜ್ಯೂಸ್, ಸಲಾಡ್, ವಿವಿಧ ಆಹಾರ ಪದಾರ್ಥಗಳು ಮತ್ತು ಸಾಂಪ್ರದಾಯಿಕ ಅಡುಗೆಗಳಲ್ಲಿ ಕೂಡ ಬಳಸಲಾಗುತ್ತದೆ. ಇದರ ವಿಶೇಷತೆ ಎಂದರೆ ಒಂದೇ ಹಣ್ಣಿನೊಳಗೆ ರುಚಿ ಮತ್ತು ಪೌಷ್ಟಿಕತೆಯ ಸುಂದರ ಸಂಯೋಜನೆ ಕಂಡುಬರುವುದು. ಮಕ್ಕಳಿಂದ ಹಿಡಿದು ಹಿರಿಯರವರೆಗೆ ಬಹುತೇಕ ಎಲ್ಲ ವಯೋಮಾನದವರು ಇದನ್ನು ಇಷ್ಟಪಡುತ್ತಾರೆ.

**ಉತ್ಕರ್ಷಣ ನಿರೋಧಕಗಳ ಉತ್ತಮ ಮೂಲ**

ದಾಳಿಂಬೆಯ ಬಗ್ಗೆ ಹೆಚ್ಚು ಗಮನ ಸೆಳೆಯುವ ಅಂಶವೆಂದರೆ ಅದರಲ್ಲಿರುವ ಉತ್ಕರ್ಷಣ ನಿರೋಧಕ ಸಂಯುಕ್ತಗಳು. ದೇಹದಲ್ಲಿ ಉಂಟಾಗುವ ಆಕ್ಸಿಡೇಟಿವ್ ಒತ್ತಡದಿಂದ



ಕೋಶಗಳಿಗೆ ಉಂಟಾಗಬಹುದಾದ ಹಾನಿಯನ್ನು ಎದುರಿಸುವಲ್ಲಿ ಇಂತಹ ಸಂಯುಕ್ತಗಳು ಪಾತ್ರವಹಿಸುತ್ತವೆ. ಆಹಾರದಲ್ಲಿ ವಿವಿಧ ಬಣ್ಣಗಳ ಹಣ್ಣು ಮತ್ತು ತರಕಾರಿಗಳನ್ನು ಸೇರಿಸುವುದು ಒಟ್ಟಾರೆ ಆರೋಗ್ಯಕರ ಆಹಾರ ಪದ್ಧತಿಯ ಒಂದು ಭಾಗವಾಗಿದೆ. ಆ ದೃಷ್ಟಿಯಿಂದ ದಾಳಿಂಬೆಯಂತಹ ಹಣ್ಣುಗಳು ಆಹಾರದಲ್ಲಿ ವೈವಿಧ್ಯತೆಯನ್ನು ತರಲು ಸಹಾಯ ಮಾಡುತ್ತವೆ.

**ಹೃದಯದ ಆರೋಗ್ಯದ ದೃಷ್ಟಿಯಿಂದಲೂ ಮಹತ್ವ**

ಸಮತೋಲನದ ಆಹಾರ ಪದ್ಧತಿಯಲ್ಲಿ ಹಣ್ಣುಗಳಿಗೆ ಪ್ರಮುಖ ಸ್ಥಾನವಿದೆ. ದಾಳಿಂಬೆಯಲ್ಲಿರುವ ಪಾಲಿಫಿನಾಲ್‌ಗಳು ಸೇರಿದಂತೆ ಸಸ್ಯಜನ್ಯ ಸಂಯುಕ್ತಗಳ ಕುರಿತು ಹೃದಯ ಮತ್ತು ರಕ್ತನಾಳಗಳ ಆರೋಗ್ಯದ ಹಿನ್ನೆಲೆಯಲ್ಲಿ ಹಲವು ಅಧ್ಯಯನಗಳು ನಡೆದಿವೆ. ಆದರೆ ದಾಳಿಂಬೆಯನ್ನು ಯಾವುದೇ ಕಾಯಿಲೆಗೆ ಔಷಧಿಯ ಪರ್ಯಾಯವಾಗಿ ಪರಿಗಣಿಸಬಾರದು. ಆರೋಗ್ಯಕರ ಆಹಾರ, ನಿಯಮಿತ ವ್ಯಾಯಾಮ, ಉತ್ತಮ ನಿದ್ರೆ ಮತ್ತು ವೈದ್ಯರ ಸಲಹೆ?ಇವೆಲ್ಲವೂ ಒಟ್ಟಾಗಿ ಆರೋಗ್ಯ ಕಾಪಾಡುವಲ್ಲಿ ಮುಖ್ಯವಾಗುತ್ತವೆ.

**ಜೀರ್ಣಕ್ರಿಯೆಗೆ ಸಹಾಯಕವಾಗುವ ನಾರಿನಾಂಶ**

ದಾಳಿಂಬೆ ಕಾಳುಗಳಲ್ಲಿ ನಾರಿನಾಂಶವೂ ಇದೆ. ಆಹಾರದಲ್ಲಿನ ನಾರಿನಾಂಶ ಸಾಮಾನ್ಯ ಜೀರ್ಣಕ್ರಿಯೆ ಮತ್ತು ಕರುಳಿನ ಆರೋಗ್ಯಕ್ಕೆ ಅಗತ್ಯವಾಗಿದೆ. ಆದ್ದರಿಂದ ಜ್ಯೂಸ್ ಮಾತ್ರ ಕುಡಿಯುವುದಕ್ಕಿಂತ ಕಾಳುಗಳನ್ನೇ ತಿನ್ನುವುದರಿಂದ ಹಣ್ಣಿನ ನಾರಿನಾಂಶವನ್ನು ಪಡೆಯಬಹುದು. ಹಣ್ಣುಗಳನ್ನು ತಿನ್ನುವಾಗ ಚೆನ್ನಾಗಿ ತೊಳೆದು, ತಾಜಾವಾಗಿರುವ ಹಣ್ಣುಗಳನ್ನು ಆಯ್ಕೆ ಮಾಡುವುದು ಉತ್ತಮ.

**ರಕ್ತದ ಬಗ್ಗೆ ಇರುವ ಜನಪ್ರಿಯ ನಂಬಿಕೆ**

ದಾಳಿಂಬೆಯನ್ನು ರಕ್ತವರ್ಧಕ ಹಣ್ಣು ಎಂದು ಜನರು ಸಾಮಾನ್ಯವಾಗಿ ಕರೆಯುತ್ತಾರೆ. ಇದರ ಕೆಂಪು ಬಣ್ಣ ಮತ್ತು ಪೌಷ್ಟಿಕಾಂಶಗಳ ಕಾರಣದಿಂದ ಈ ನಂಬಿಕೆ ವ್ಯಾಪಕವಾಗಿದೆ. ದಾಳಿಂಬೆಯಲ್ಲಿ ಕೆಲವು ಖನಿಜಾಂಶಗಳು ಮತ್ತು ವಿಟಮಿನ್‌ಗಳು ಇದ್ದರೂ, ರಕ್ತಹೀನತೆಯನ್ನು ಗುಣಪಡಿಸಲು ದಾಳಿಂಬೆ ಮಾತ್ರ ಸಾಕಾಗುವುದಿಲ್ಲ. ರಕ್ತಹೀನತೆ ಇದ್ದರೆ ಅದರ ಕಾರಣ ತಿಳಿದುಕೊಂಡು ವೈದ್ಯರ ಸಲಹೆಯಂತೆ ಸೂಕ್ತ ಆಹಾರ ಮತ್ತು ಅಗತ್ಯವಿದ್ದರೆ ಚಿಕಿತ್ಸೆಯನ್ನು ಪಡೆಯಬೇಕು.

**ಚರ್ಮದ ಕಾಂತಿಗೂ ಪ್ರಕೃತಿಯ ಕೊಡುಗೆ**

ಆರೋಗ್ಯಕರ ಚರ್ಮಕ್ಕೆ ಸಮತೋಲನದ ಆಹಾರ ಬಹಳ ಮುಖ್ಯ. ಹಣ್ಣುಗಳು ಮತ್ತು ತರಕಾರಿಗಳಲ್ಲಿರುವ ವಿವಿಧ ವಿಟಮಿನ್‌ಗಳು ಹಾಗೂ ಉತ್ಕರ್ಷಣ ನಿರೋಧಕ ಸಂಯುಕ್ತಗಳು ದೇಹದ ಒಟ್ಟಾರೆ ಆರೋಗ್ಯಕ್ಕೆ ಕೊಡುಗೆ ನೀಡುತ್ತವೆ. ದಾಳಿಂಬೆಯಲ್ಲಿರುವ ಸಸ್ಯಜನ್ಯ ಸಂಯುಕ್ತಗಳ ಕಾರಣದಿಂದ ಇದು ಆರೋಗ್ಯಕರ ಆಹಾರ ಪಟ್ಟಿಯಲ್ಲಿ ಸ್ಥಾನ ಪಡೆಯುತ್ತದೆ. ಆದರೆ ಕೇವಲ ದಾಳಿಂಬೆ ತಿಂದರೆ ಚರ್ಮದ ಎಲ್ಲಾ ಸಮಸ್ಯೆಗಳು ದೂರವಾಗುತ್ತವೆ ಎಂಬುದಾಗಿ ಹೇಳುವುದು ವೈಜ್ಞಾನಿಕವಾಗಿ ಸರಿಯಲ್ಲ.

**ದಾಳಿಂಬೆ ತಿನ್ನುವ ಸರಿಯಾದ ವಿಧಾನ**

ತಾಜಾ ದಾಳಿಂಬೆ ಕಾಳುಗಳನ್ನು ನೇರವಾಗಿ ತಿನ್ನುವುದು ಅತ್ಯಂತ ಸರಳ ವಿಧಾನ. ಬೆಳಗಿನ ಉಪಾಹಾರ, ಮಧ್ಯಾಹ್ನದ ಊಟದ ನಂತರ ಅಥವಾ ಸಂಜೆ ಲಘು ಆಹಾರದ ಭಾಗವಾಗಿ ಇದನ್ನು ಸೇವಿಸಬಹುದು. ದಾಳಿಂಬೆ ಕಾಳುಗಳನ್ನು ಹಣ್ಣಿನ ಸಲಾಡ್‌ಗೆ ಸೇರಿಸಬಹುದು. ಮೊಸರು, ಓಟ್ಸ್ ಅಥವಾ ಇತರ ಹಣ್ಣುಗಳೊಂದಿಗೆ ಕೂಡ ಬಳಸಬಹುದು. ಜ್ಯೂಸ್ ರೂಪದಲ್ಲಿ ಸೇವಿಸುವಾಗ ಹೆಚ್ಚುವರಿ ಸಕ್ಕರೆ ಸೇರಿಸದಿರುವುದು ಉತ್ತಮ.

**ಜ್ಯೂಸ್‌ಗಿಂತ ಕಾಳುಗಳೇ ಏಕೆ ಉತ್ತಮ**

ಹಣ್ಣನ್ನು ಜ್ಯೂಸ್ ಮಾಡಿದಾಗ ಅದರ ನಾರಿನಾಂಶದ ಒಂದು ಭಾಗ ಕಡಿಮೆಯಾಗಬಹುದು. ಮತ್ತೊಂದೆಡೆ, ಕಾಳುಗಳನ್ನು ನೇರವಾಗಿ ತಿನ್ನುವುದರಿಂದ ನಾರಿನಾಂಶ ಸೇರಿದಂತೆ ಹಣ್ಣಿನ ಸಂಪೂರ್ಣ ಭಾಗವನ್ನು ಪಡೆಯುವ ಅವಕಾಶವಿದೆ. ಆದ್ದರಿಂದ ಸಾಧ್ಯವಾದಷ್ಟು ತಾಜಾ ದಾಳಿಂಬೆ ಕಾಳುಗಳನ್ನು ನೇರವಾಗಿ ತಿನ್ನುವುದು ಉತ್ತಮ ಆಯ್ಕೆಯಾಗಬಹುದು.

**ಮಕ್ಕಳ ಆಹಾರದಲ್ಲೂ ದಾಳಿಂಬೆ**

ಮಕ್ಕಳಿಗೆ ವಿವಿಧ ಹಣ್ಣುಗಳ ಪರಿಚಯ ಮಾಡಿಸುವುದು ಆರೋಗ್ಯಕರ ಆಹಾರ ಪದ್ಧತಿಯನ್ನು ಬೆಳೆಸಲು ಸಹಾಯ ಮಾಡುತ್ತದೆ. ದಾಳಿಂಬೆಯ ಸಿಹಿ-ಹುಳಿ ರುಚಿ ಮಕ್ಕಳನ್ನು ಆಕರ್ಷಿಸಬಹುದು. ಆದರೆ ಚಿಕ್ಕ ಮಕ್ಕಳಿಗೆ ಕಾಳುಗಳನ್ನು ನೀಡುವಾಗ ವಯಸ್ಸಿಗೆ ಅನುಗುಣವಾಗಿ ಸುರಕ್ಷಿತವಾಗಿ ನೀಡಬೇಕು ಮತ್ತು ತಿನ್ನುವಾಗ ಮೇಲ್ವಿಚಾರಣೆ ಇರಬೇಕು.

**ರೈತರ ಪಾಲಿನ ಮೌಲ್ಯಯುತ ಬೆಳೆ**

ದಾಳಿಂಬೆ ಕೇವಲ ಗ್ರಾಹಕರಿಗೆ ಪೌಷ್ಟಿಕ ಹಣ್ಣು ಮಾತ್ರವಲ್ಲ; ಅನೇಕ ರೈತರಿಗೆ ಆದಾಯದ ಮೂಲವೂ ಹೌದು. ಸೂಕ್ತ ಹವಾಮಾನ, ಮಣ್ಣಿನ ಗುಣಮಟ್ಟ, ನೀರಿನ ಲಭ್ಯತೆ ಮತ್ತು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅನುಸರಿಸಿದರೆ ದಾಳಿಂಬೆ ಬೆಳೆ ಉತ್ತಮ ವಾಣಿಜ್ಯ ಮೌಲ್ಯವನ್ನು ಹೊಂದಬಹುದು. ಆದರೆ ದಾಳಿಂಬೆ ಕೃಷಿಯಲ್ಲಿ ರೋಗ-ಕೀಟ ನಿರ್ವಹಣೆ, ನೀರಿನ ನಿರ್ವಹಣೆ ಮತ್ತು ಮಾರುಕಟ್ಟೆ ಬೆಲೆಗಳಂತಹ ಸವಾಲುಗಳೂ ಇವೆ. ಆದ್ದರಿಂದ ರೈತರು ಕೃಷಿ ತಜ್ಞರ ಸಲಹೆ ಪಡೆದು ವೈಜ್ಞಾನಿಕ ಪದ್ಧತಿಯಲ್ಲಿ ಬೆಳೆ ಬೆಳೆಸುವುದು ಮುಖ್ಯ.

**ದಾಳಿಂಬೆ ಆಹಾರದಲ್ಲಿ ಒಂದು ಸುಂದರ ಸೇರ್ಪಡೆ**

ಪ್ರಕೃತಿಯ ಬಣ್ಣಗಳಲ್ಲಿ ಕೆಂಪು ಬಣ್ಣಕ್ಕೆ ವಿಶಿಷ್ಟ ಆಕರ್ಷಣೆ ಇದೆ. ದಾಳಿಂಬೆಯ ಕಾಳುಗಳ ಕೆಂಪು ಬಣ್ಣವೂ ಅದಕ್ಕೆ ವಿಶೇಷ ಸೌಂದರ್ಯ ನೀಡುತ್ತದೆ. ಹಣ್ಣನ್ನು ತೆರೆದಾಗ ಕಾಣುವ ಮುತ್ತಿನ ಸಾಲಿನಂತಹ ಕಾಳುಗಳು ಪ್ರಕೃತಿಯ ಅದ್ಭುತ ವಿನ್ಯಾಸವನ್ನು ನೆನಪಿಸುತ್ತವೆ. ರುಚಿಯ ಜೊತೆಗೆ ಪೌಷ್ಟಿಕಾಂಶ, ನಾರಿನಾಂಶ ಮತ್ತು ವಿವಿಧ ಸಸ್ಯಜನ್ಯ ಸಂಯುಕ್ತಗಳನ್ನು ಹೊಂದಿರುವ ದಾಳಿಂಬೆ, ಸಮತೋಲನದ ಆಹಾರದಲ್ಲಿ ಸೇರಿಸಬಹುದಾದ ಉತ್ತಮ ಹಣ್ಣು. ಯಾವುದೇ ಒಂದು ಆಹಾರವನ್ನೇ ಆರೋಗ್ಯದ ಸಂಪೂರ್ಣ ಪರಿಹಾರವೆಂದು ಪರಿಗಣಿಸದೆ, ವಿವಿಧ ಹಣ್ಣು-ತರಕಾರಿಗಳು, ಧಾನ್ಯಗಳು, ಬೇಳೆಕಾಳುಗಳು ಮತ್ತು ಇತರ ಪೌಷ್ಟಿಕ ಆಹಾರಗಳೊಂದಿಗೆ ದಾಳಿಂಬೆಯನ್ನು ಸೇರಿಸಿಕೊಳ್ಳುವುದು ಹೆಚ್ಚು ಸೂಕ್ತ.

**ಕೊನೆಯ ಮಾತು**

ದಾಳಿಂಬೆ ಎಂದರೆ ಕೇವಲ ಕೆಂಪು ಕಾಳುಗಳ ಹಣ್ಣು ಅಲ್ಲ; ಪ್ರಕೃತಿಯೊಳಗೆ ಅಡಗಿರುವ ಪೌಷ್ಟಿಕತೆಯ ಸುಂದರ ಸಂಕೇತ. ರುಚಿ, ಬಣ್ಣ ಮತ್ತು ಪೌಷ್ಟಿಕ ಗುಣಗಳ ಸಮನ್ವಯದಿಂದ ದಾಳಿಂಬೆ ನಮ್ಮ ದಿನನಿತ್ಯದ ಆಹಾರದಲ್ಲಿ ಸ್ಥಾನ ಪಡೆಯಲು ಅರ್ಹವಾದ ಹಣ್ಣು. ಆರೋಗ್ಯಕರ ಜೀವನಕ್ಕೆ ಒಂದೇ ಒಂದು ಹಣ್ಣು ಅಥವಾ ಆಹಾರ ಸಾಕಾಗುವುದಿಲ್ಲ. ಆದರೆ ಸಮತೋಲನದ ಆಹಾರ ಪದ್ಧತಿಯಲ್ಲಿ ದಾಳಿಂಬೆಯಂತಹ ನೈಸರ್ಗಿಕ ಹಣ್ಣುಗಳನ್ನು ನಿಯಮಿತವಾಗಿ ಸೇರಿಸಿಕೊಳ್ಳುವುದು ಉತ್ತಮ ಆಹಾರ ಸಂಸ್ಕೃತಿಯ ಒಂದು ಭಾಗವಾಗಬಹುದು.

ವಿನಾಯಕ ಬಿ. ತಿಪ್ಪಣ್ಣನವರ

ಈ ನಮ್ಮ ಧೃತಿ ನ್ಯೂಸ್
E NAMMA DHURTHI NEWS
KANNADA DAILY NEWS PAPER

## ಕಾಡಾನೆಗಳ ಕಾದಾಟಕ್ಕೆ ಮನೆ ಜಖಂ, ಕೌರಿಗ್ರಾಮದಲ್ಲಿ ಗ್ರಾಮಸ್ಥರಲ್ಲಿ ಆತಂಕ



ಬೇಲೂರು: ತಾಲ್ಲೂಕಿನಲ್ಲಿ ಕಾಡಾನೆಗಳ ಉಪಟಳ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಮನೆಯೊಂದರ ಸಮೀಪವೇ ಎರಡು ಕಾಡಾನೆಗಳು ಕಾದಾಡಿಕೊಂಡು ಎರಡು ಮರಗಳನ್ನು ನೆಲಕ್ಕುರುಳಿಸಿದ ಪರಿಣಾಮ ಮನೆ ಜಖಂಗೊಂಡಿರುವ ಘಟನೆ ಕೌರಿಗ್ರಾಮದಲ್ಲಿ ನಡೆದಿದೆ. ಘಟನೆಯಿಂದ ಗ್ರಾಮಸ್ಥರು ಬೆಚ್ಚಿಬಿದ್ದಿದ್ದಾರೆ.

ತಾಲ್ಲೂಕಿನ ಮಲೆನಾಡು ಭಾಗದ ವಿವಿಧ ಗ್ರಾಮಗಳಲ್ಲಿ ಬೀಡುಬಿಟ್ಟಿರುವ ಕಾಡಾನೆಗಳ ಪೈಕಿ 30ರಿಂದ 40ಕ್ಕೂ ಹೆಚ್ಚು ಆನೆಗಳು ಕೌರಿಗ್ರಾಮದ ಸುತ್ತಮುತ್ತ ಸಂಚ–ರಿಸುತ್ತಿವೆ. ಹಗಲು–ರಾತ್ರಿ ಎನ್ನದೆ ತೋಟಗಳಿಗೆ ಲಗ್ಗೆ ಇಡುತ್ತಿರುವ ಆನೆಗಳ ಹಿಂಡು ಬೆಳೆಗಳನ್ನು ನಾಶಪಡಿಸುತ್ತಿದ್ದು, ಗ್ರಾಮಸ್ಥರು ಆತಂಕದಲ್ಲೇ ದಿನದೂಡುತ್ತಿದ್ದಾರೆ. ಇದೀಗ ಹಿಂಡಿನಿಂದ ಬೇರ್ಪಟ್ಟ ಮದವೇರಿದ ಎರಡು ಕಾಡಾನೆಗಳು ಕೌರಿಗ್ರಾಮದ ವಾಸದ ಮನೆಗಳ ಸಮೀಪವೇ ಬೆಳಗಿನ ಜಾವ ಕಾದಾಟಕ್ಕಿಳಿದಿವೆ. ಪರಸ್ಪರ ಬಡಿದಾಡಿಕೊಂಡ ಆನೆಗಳು ಎದುರಿಗೆ ಸಿಕ್ಕ ಗಿಡ–ಮರಗಳನ್ನು ಉರುಳಿಸಿದ್ದು, ತೋಟದಲ್ಲಿನ ಬೆಳೆಗಳಿಗೂ ಹಾನಿಯಾಗಿದೆ. ಆನೆಗಳ ಕಾದಾಟದ ವೇಳೆ ಉರುಳಿದ ಮರಗಳು ಗ್ರಾಮದ ಪ್ರಸನ್ನ ಎಂಬುವವರ ಮನೆಯ ಮೇಲೆ ಬಿದ್ದ ಪರಿಣಾಮ ಮನೆ ಜಖಂಗೊಂಡಿದೆ. ಮನೆಯ ಹೆಂಚುಗಳು, ಮರದ ವಸ್ತುಗಳು ಹಾಗೂ ಮನೆಗೆ ಹೊಂದಿಕೊಂಡಿದ್ದ ಶೆಡ್ ಕೂಡ ಹಾನಿಗೊಳಗಾಗಿದೆ. ಎರಡು ಕಾಡಾನೆಗಳು ಮನೆಯ ಸಮೀಪವೇ ಕಾದಾಡುತ್ತಿರುವ ದೃಶ್ಯವನ್ನು ಕಣ್ಣಾರೆ ಕಂಡ ಗ್ರಾಮಸ್ಥರು ಭಯಭೀತರಾಗಿದ್ದಾರೆ. ಇದೇ ಗ್ರಾಮದ ಭುವನೇಶ್ವರ, ಪರಮೇಶ್ವರಯ್ಯ ಹಾಗೂ ಮಧು ಎಂಬುವವರ ತೋಟಗಳಲ್ಲೂ ಕಾಡಾನೆಗಳು ಬೀಡುಬಿಟ್ಟಿದ್ದು, ಬೆಳೆಗಳನ್ನು ತಿಂದು ತುಳಿದು ನಾಶಪಡಿಸಿವೆ. ತೋಟಗಳಲ್ಲಿ ಮನಬಂದಂತೆ ಓಡಾಡುತ್ತಿರುವ ಆನೆಗಳಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದ್ದು, ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ ಎಂದು ಬೆಳೆಗಾರರು ತಿಳಿಸಿದ್ದಾರೆ. ಕಾಡಾನೆಗಳ ನಿರಂತರ ಉಪಟಳದಿಂದ ಬೆಳೆಗಾರರು ಹಾಗೂ ಗ್ರಾಮಸ್ಥರು ಕಂಗಾಲಾಗಿದ್ದು, ಆನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸಿ ಶಾಶ್ವತ ಪರಿಹಾರ ಕಲ್ಪಿಸುವಂತೆ ಅರಣ್ಯ ಇಲಾಖೆಯನ್ನು ಒತ್ತಾಯಿಸಿದ್ದಾರೆ.

## ವಿಶ್ವಸಂಸ್ಥೆಯ ನಕ್ಷೆ ನಿರ್ಣಯ ; ಕಾಶ್ಮೀರ ವಿಚಾರ ಕೆದಕಿದ ಪಾಕಿಸ್ತಾನಕ್ಕೆ ಭಾರತ ತಿರುಗೇಟು


ನವದೆಹಲಿ/ಇಸ್ಲಾಮಾಬಾದ್: ವಿಶ್ವಸಂಸ್ಥೆಯಲ್ಲಿ ಇತ್ತೀಚೆಗೆ ಅಂಗೀಕರಿಸಲಾದ ಜಾಗತಿಕ ನಕ್ಷೆಯ ಪ್ರಾತಿನಿಧ್ಯಕ್ಕೆ ಸಂಬಂಧಿಸಿದ ನಿರ್ಣಯವನ್ನು ಭಾರತ ಬೆಂಬಲಿಸಿದ ಬೆನ್ನಲ್ಲೇ, ಜಮ್ಮು ಮತ್ತು ಕಾಶ್ಮೀರ ವಿಚಾರದಲ್ಲಿ ಪಾಕಿಸ್ತಾನ ಮತ್ತೊಮ್ಮೆ ಆಧಾರರಹಿತ ಹಾಗೂ ಪ್ರಚೋದನಕಾರಿ ಹೇಳಿಕೆ ನೀಡಿದೆ.



ವಿಶ್ವ ಭೂಪಟದಲ್ಲಿ ದೇಶಗಳು ಹಾಗೂ ಭೂಖಂಡಗಳ ಗಾತ್ರವನ್ನು ಹೆಚ್ಚು ಸಮಾನವಾಗಿ ಪ್ರತಿನಿಧಿಸುವ ಉದ್ದೇಶ ಹೊಂದಿರುವ ಈ ನಿರ್ಣಯಕ್ಕೂ ರಾಷ್ಟ್ರೀಯ ಗಡಿಗಳಿಗೂ ಯಾವುದೇ ಸಂಬಂಧವಿಲ್ಲ ಎಂದು ಭಾರತ ಸ್ಪಷ್ಟಪಡಿಸಿದೆ. ಆದರೂ ಪಾಕಿಸ್ತಾನ ಈ ವಿಷಯವನ್ನು ಕಾಶ್ಮೀರ ವಿವಾದದೊಂದಿಗೆ ತಳುಕು ಹಾಕಲು ಮುಂದಾಗಿದೆ. ಸೆ.4ರಂದು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಟೋಗೊ ಪ್ರಾಯೋಜಿತ 'ಜಾಗತಿಕ ನಕ್ಷೆಯ ಪ್ರಾತಿನಿಧ್ಯವನ್ನು ಮರುಸಮತೋಲನಗೊಳಿಸುವುದು' ಎಂಬ ಶೀರ್ಷಿಕೆಯ ನಿರ್ಣಯ ಮಂಡಿಸಲಾಯಿತು. ಭೂಖಂಡಗಳ ಸಾಪೇಕ್ಷ ಗಾತ್ರವನ್ನು ಹೆಚ್ಚು ನಿಖರವಾಗಿ ಬಿಂಬಿಸುವ ಸಮಾನ–ಪ್ರದೇಶದ ನಕ್ಷೆಗಳ ಬಳಕೆಯನ್ನು ಉತ್ತೇಜಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಭಾರತದ ಸ್ಪಷ್ಟ ನಿಲುವು ಭಾರತದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು, ಜಮ್ಮು ಮತ್ತು ಕಾಶ್ಮೀರ ಹಾಗೂ ಲಡಾಖ್ ಭಾರತದ ಅವಿಭಾಜ್ಯ ಅಂಗಗಳಾಗಿವೆ ಎಂದು ಸ್ಪಷ್ಟಪಡಿಸಿದ್ದಾರೆ. ಭಾರತದ ಸಾರ್ವಭೌಮತ್ವ ಹಾಗೂ ಪ್ರಾದೇಶಿಕ ಸಮಗ್ರತೆಯ ಕುರಿತು ದೇಶದ ನಿಲುವಿನಲ್ಲಿ ಯಾವುದೇ ಬದಲಾವಣೆಯಿಲ್ಲ ಎಂದು ಅವರು ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಪಾಕಿಸ್ತಾನದ ವಿದೇಶಾಂಗ ಸಚಿವಾಲಯ, ಕಾಶ್ಮೀರವನ್ನು ಅಂತರರಾಷ್ಟ್ರೀಯವಾಗಿ ಗುರುತಿಸಲ್ಪಟ್ಟ ವಿವಾದಿತ ಪ್ರದೇಶವೆಂದು ಬಣ್ಣಿಸಿ ತನ್ನ ಹಳೆಯ ನಿಲುವನ್ನೇ ಪುನರುಚ್ಚರಿಸಿದೆ. ವಿಶ್ವಸಂಸ್ಥೆಯ ನಕ್ಷೆ ಪ್ರಾತಿನಿಧ್ಯಕ್ಕೆ ಸಂಬಂಧಿಸಿದ ತಾಂತ್ರಿಕ ನಿರ್ಣಯವನ್ನು ಕಾಶ್ಮೀರ ವಿಚಾರದೊಂದಿಗೆ ತಳುಕು ಹಾಕಿರುವ ಪಾಕಿಸ್ತಾನದ ನಡೆಗೆ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಇದರಿಂದ ಉಭಯ ರಾಷ್ಟ್ರಗಳ ನಡುವಿನ ರಾಜ–ತಾಂತ್ರಿಕ ವಾಗ್ವಾದ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ.

ಈ ನಮ್ಮ ಧೃತಿ ನ್ಯೂಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.
ಮೊ: 7353595904

# ಕರ್ಮಭೂಮಿಗೆ ದ್ರೋಹ ಬಗೆಯಲು ಹಿಂದುತ್ವ ಎಂದಿಗೂ ಹೇಳುವುದಿಲ್ಲ: ಮೋಹನ್ ಭಾಗವತ್



ಲಂಡನ್: ವಿದೇಶಗಳಲ್ಲಿ ನೆಲೆಸಿರುವ ಹಿಂದೂ ಸಮುದಾಯವು ತಾವು ವಾಸಿಸುವ ದೇಶದ ಕಾನೂನು, ಸಂಸ್ಕೃತಿ ಹಾಗೂ ಕರ್ತವ್ಯಗಳಿಗೆ ಬದ್ಧರಾಗಿ ಬದುಕಬೇಕು ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಸರಸಂಘಚಾಲಕ ಮೋಹನ್ ಭಾಗವತ್ ಕರೆ ನೀಡಿದ್ದಾರೆ.

ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ ಯುನೈಟೆಡ್ ಕಿಂಗ್‌ಡಮ್‌ಗೆ ಭೇಟಿ ನೀಡಿರುವ ಅವರು, ಲಂಡನ್‌ನಲ್ಲಿ ನಡೆದ ನಾಗರಿಕ ಸಂವಾದ ಹಾಗೂ ಸಮುದಾಯ ನಾಯಕರ ಸಭೆಯಲ್ಲಿ ಮಾತನಾಡಿದರು. ಭಾರತ ಮತ್ತು ಬ್ರಿಟನ್ ನಡುವಿನ ಹಿತಾಸಕ್ತಿಗಳು ವಿಭಿನ್ನವಾಗಿರಬಹುದಾದರೂ, ಬ್ರಿಟಿಷ್ ಹಿಂದೂಗಳು ತಮ್ಮ ಕರ್ಮಭೂಮಿಗೆ ಸಂಪೂರ್ಣ ಪ್ರಾಮಾಣಿಕರಾಗಿರಬೇಕು ಎಂದು ಭಾಗವತ್ ಹೇಳಿದರು. ಜನ್ಮಭೂಮಿಯಿಂದ ಸಾಂಸ್ಕೃತಿಕ ಮೌಲ್ಯಗಳನ್ನು ಪಡೆದವರು, ಆ ಮೌಲ್ಯಗಳನ್ನು ತಾವು ವಾಸಿಸುವ ದೇಶದಲ್ಲಿ ಸತ್ಕಾರ್ಯಗಳ ಮೂಲಕ ಕಾರ್ಯರೂಪಕ್ಕೆ ತರಬೇಕು. ಬ್ರಿಟಿಷ್ ಹಿಂದೂಗಳು ಅಲ್ಲಿನ ಸಮಾಜದೊಂದಿಗೆ ಬೆರೆತು, ದೇಶದ ಕಾನೂನು ಹಾಗೂ ವ್ಯವಸ್ಥೆಗಳಿಗೆ ಅನುಗುಣವಾಗಿ ಪ್ರಾಮಾಣಿಕ ಜೀವನ ನಡೆಸಿದರೆ ಯಾವುದೇ ದ್ವಂದ್ವ ಅಥವಾ ಸಂಘರ್ಷಕ್ಕೆ ಅವಕಾಶ ಇರುವುದಿಲ್ಲ ಎಂದು ಅವರು ಪ್ರತಿಪಾದಿಸಿದರು.

**ಲಂಡನ್‌ನಲ್ಲಿ ಶತಮಾನೋತ್ಸವ ಕಾರ್ಯಕ್ರಮ**

ಆರ್‌ಎಸ್‌ಎಸ್ ತನ್ನ ಸ್ಥಾಪನೆಯ ಶತಮಾನೋತ್ಸವದ ಅಂಗವಾಗಿ ಜಾಗತಿ–ಕ ಮಟ್ಟದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಇದರ ಭಾಗವಾಗಿ ಮೋಹನ್ ಭಾಗವತ್ ಅವರು ನ್ಯೂಯಾರ್ಕ್, ಟೊರೊಂಟೊ ಬಳಿಕ ಸೆಪ್ಟೆಂಬರ್ 2ರಂದು ಲಂಡನ್‌ಗೆ ಆಗಮಿಸಿದ್ದರು. ಸೆಪ್ಟೆಂಬರ್ 6ರಂದು ಲಂಡನ್‌ನಲ್ಲಿ ನಡೆದ ಏಕತೆಯ ಆಚರಣೆ ಕಾರ್ಯಕ್ರಮದಲ್ಲಿ ಯುಕೆ?ದ್ಯಂತದ 310ಕ್ಕೂ ಹೆಚ್ಚು ಸಮುದಾಯ ಸಂಸ್ಥೆಗಳು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು. ಹಿಂದೂ ಸ್ವಯಂಸೇವಕ ಸಂಘ ಯುಕೆ ಸೇ–ರಿದಂತೆ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

**ಐದು ಕ್ಷೇತ್ರಗಳಿಗೆ ಆದ್ಯತೆ**

ಆರ್‌ಎಸ್‌ಎಸ್ ಶತಮಾನೋತ್ಸವದ ಹಿನ್ನೆಲೆಯಲ್ಲಿ 'ವಸುಧೈವ ಕುಟುಂಬಕಂ' ಎಂಬ ಭಾರತೀಯ ಪರಿಕಲ್ಪನೆಯನ್ನು ಜಾಗತಿ–ಕ ಮಟ್ಟದಲ್ಲಿ ಸಾರುವ ಪ್ರಯತ್ನ ನಡೆಸುತ್ತಿದೆ. ಇದರ ಭಾಗವಾಗಿ ಸಾಮಾಜಿಕ ಸಾಮರಸ್ಯ, ಕುಟುಂಬ ಮೌಲ್ಯಗಳ ಬಲವರ್ಧನೆ, ಪರಿಸರ ಜವಾಬ್ದಾರಿ, ಸ್ವಾವಲಂಬನೆ ಹಾಗೂ ನಾಗರಿಕ ಜವಾಬ್ದಾರಿ ಎಂಬ ಐದು ಪ್ರಮುಖ ಕ್ಷೇತ್ರಗಳಿಗೆ ಆದ್ಯತೆ ನೀಡಲಾಗಿದೆ. ಈ ಹಿಂದೆ ಆರ್‌ಎಸ್–ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೇಯ ಹೊಸಬಾಳೆ ಅವರು ಯುಕೆ, ಅಮೆರಿಕ ಹಾಗೂ ಜರ್ಮನಿಗೆ ಭೇಟಿ ನೀಡಿ ಜಾಗತಿಕ ಸಂವಾದಕ್ಕೆ ಬುನಾದಿ ಹಾಕಿದ್ದರು. ಆಗಸ್ಟ್ 29ರಂದು ನ್ಯೂಯಾರ್ಕ್‌ನಲ್ಲಿ ನಡೆದ ಬಹುಧರ್ಮೀಯ ನಾಯಕರ ಸಭೆಯಲ್ಲೂ ಮೋಹನ್ ಭಾಗವತ್ ಅವರು ಸೌಹಾರ್ದತೆ ಹಾಗೂ ಜಾಗತಿಕ ಶಾಂತಿಯ ಸಂದೇಶ ನೀಡಿದ್ದರು.

ಲಂಡನ್‌ನಲ್ಲಿ ನಡೆದ ಕಾರ್ಯಕ್ರಮವು ಭಾರತ ಮತ್ತು ಬ್ರಿಟನ್ ನಡುವಿನ ಸಾಂಸ್ಕೃತಿಕ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದೊಂದಿಗೆ ನಡೆದಿದ್ದು, ವಿದೇಶಗಳಲ್ಲಿರುವ ಭಾರತೀಯ ಸಮುದಾಯದ ಸಾಮಾಜಿಕ ಹೊಣೆಗಾರಿಕೆ ಕುರಿತ ಚರ್ಚೆಗೂ ವೇದಿಕೆಯಾಯಿತು.

# ಉದ್ಯೋಗ ಹುಡುಕುವ ಬದಲು ಉದ್ಯಮಿಗಳಾಗಿ : ಅನಿವಾಸಿ ಭಾರತೀಯರಿಗೆ ಕುಮಾರಸ್ವಾಮಿ ಕರೆ




ಅಮೆರಿಕ: ಉದ್ಯೋಗ ಹುಡುಕುವ ಬದಲು ಉದ್ಯಮಿಗಳಾಗಿ, ವಿದೇಶಗಳಲ್ಲಿ ನೆಲೆಸಿರುವ ಭಾರತೀಯರು ತಮ್ಮ ತಂತ್ರಜ್ಞಾನ, ಅನುಭವ ಹಾಗೂ ಪರಿಣತಿಯನ್ನು ಭಾರತದ ಅಭಿವೃದ್ಧಿಗೆ ಬಳಸಬೇಕು ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಕರೆ ನೀಡಿದ್ದಾರೆ.

ಅಮೆರಿಕದ ಫಿಲಡೆಲ್ಫಿಯಾದಲ್ಲಿ ನಡೆದ ಅಕ್ಕ ಬಿಸಿನೆಸ್ ಫೋರಂ–2026 ಸಮ್ಮೇಳನದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಭಾರತ ವೇಗವಾಗಿ ಪ್ರಗತಿ ಸಾಧಿಸುತ್ತಿದೆ. 'ಮೇಕ್ ಇನ್ ಇಂಡಿಯಾ' ಹಾಗೂ 'ಆತ್ಮನಿರ್ಭರ ಭಾರತ'ದಂತಹ ಯೋಜನೆಗಳ ಮೂಲಕ ವಿಕಸಿತ ಭಾರತದ ಗುರಿ ಸಾಧಿಸಲು ದೇಶದಲ್ಲಿ ಹೂಡಿಕೆಗೆ ಪೂರಕ ವಾತಾವರಣ ನಿರ್ಮಿಸಲಾಗಿದೆ ಎಂದು ಹೇಳಿದರು. ವಿದೇಶದಲ್ಲಿರುವ ಭಾರತೀಯರು ಭಾರತದಲ್ಲಿ ಹೂಡಿಕೆ ಮಾಡುವ ಮೂಲಕ ದೇಶದ ಕೈಗಾ–ರಿಕಾ ಬೆಳವಣಿಗೆಗೆ ಕೊಡುಗೆ ನೀಡಬೇಕು. ತಮ್ಮ ತಂತ್ರಜ್ಞಾನ, ಜ್ಞಾನ ಮತ್ತು ಜಾಗತಿ–ಕ ಅನುಭವವನ್ನು ದೇಶದ ಉತ್ಪಾದನಾ ಸಾಮರ್ಥ್ಯ ಹೆಚ್ಚಿಸಲು ಬಳಸಬೇಕು ಎಂದು ಅವರು ಮನವಿ ಮಾಡಿದರು.

**ಉತ್ಪಾದನೆ, ಹಸಿರು ಇಂಧನಕ್ಕೆ ಉತ್ತೇಜನ**

ದೇಶದ ಕೈಗಾರಿಕಾ ಪ್ರಗತಿಗಾಗಿ ಕೇಂದ್ರ ಸರ್ಕಾರ ಹಲವು ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಸಚಿವರು ವಿವರಿಸಿದರು. ?10,900 ಕೋಟಿ ವೆಚ್ಚದ ಪಿಎಂ ಇ–ಡ್ರೈವ್ ಯೋಜನೆ, ಉತ್ಪಾದನಾ ಉತ್ತೇಜನ ಯೋಜನೆಗೆ ?25,938 ಕೋಟಿ ಹಾಗೂ 50 ಜಿಗಾವಾಟ್ ಸಾಮರ್ಥ್ಯದ ಎಸಿಸಿ ಬ್ಯಾಟರಿ ಕಾರ್ಯಕ್ರಮಕ್ಕೆ ?18,100 ಕೋಟಿ ಮೀಸಲಿಡಲಾಗಿದೆ. ವಿರಳ ಖನಿಜಗಳ ಅಭಿವೃದ್ಧಿಗೂ ?7,280 ಕೋಟಿ ಮೊತ್ತದ ಯೋಜನೆ ರೂಪಿಸಲಾಗಿದೆ ಎಂದು ಮಾಹಿತಿ ನೀಡಿದರು. ಭಾರತವು ಇಂದು ವಿಶ್ವದ ಪ್ರಮುಖ ಉಕ್ಕು ಉತ್ಪಾದಕ ಹಾಗೂ ಬಳಕೆದಾರ ರಾಷ್ಟ್ರವಾಗಿ ಹೊರಹೊಮ್ಮಿದೆ. 2030ರ ವೇಳೆಗೆ ವಾರ್ಷಿಕ 300 ಮಿಲಿಯನ್ ಟನ್ ಉಕ್ಕು ಉತ್ಪಾದಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಹೊಂದಲಾಗಿದೆ ಎಂದು ಕುಮಾರಸ್ವಾಮಿ ಹೇಳಿದರು. ಈ ಗುರಿ ಸಾಧನೆಗಾಗಿ ಉಕ್ಕು ಉತ್ಪಾದನೆಗೆ ?6,322 ಕೋಟಿ ಮೊತ್ತದ ಉತ್ಪಾದನಾ ಉತ್ತೇಜನ ಯೋಜನೆ ರೂಪಿಸಲಾಗಿದೆ. ಜತೆಗೆ 2070ರ ವೇಳೆಗೆ ಉಕ್ಕು ಕ್ಷೇತ್ರದಲ್ಲಿ ನಿವ್ವಳ ಶೂನ್ಯ ಕಾರ್ಬನ್ ಹೊರಸೂಸುವಿಕೆ ಸಾಧಿಸುವ ಗುರಿಯನ್ನೂ ಭಾರತ ಹೊಂದಿದೆ ಎಂದು ಅವರು ತಿಳಿಸಿದರು. ಭಾರತದ ವೇಗವಾಗಿ ಬೆಳೆಯುತ್ತಿರುವ ಕೈಗಾರಿಕಾ ಹಾಗೂ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡಲು ಇದು ಸೂಕ್ತ ಸಮಯವಾಗಿದ್ದು, ಜಾಗತಿಕ ಮಟ್ಟದಲ್ಲಿ ಪರಿಣತಿ ಹೊಂದಿರುವ ಭಾರತೀಯರು ಈ ಅವಕಾಶವನ್ನು ಬಳಸಿಕೊಳ್ಳಬೇಕು ಎಂದು ಸಚಿವರು ಕರೆ ನೀಡಿದರು.

## ಪ್ಯಾರಿಸ್‌ನಲ್ಲಿ ಸ್ವಾಮಿನಾರಾಯಣ ದೇವಾಲಯದ ಉದ್ಘಾಟನೆ : ಭಾರತ–ಫ್ರಾನ್ಸ್ ಸಂಬಂಧಕ್ಕೆ ಹೊಸ ಆಯಾಮ



ನವದೆಹಲಿ: ಭಾರತ ಮತ್ತು ಫ್ರಾನ್ಸ್ ನಡುವಿನ ಸಂಬಂಧಗಳು ಹೊಸ ಎತ್ತರಕ್ಕೆ ತಲುಪಿದ್ದು, ದೀರ್ಘಕಾಲದ ಸಾಂಸ್ಕೃತಿಕ ಹಾಗೂ ರಾಜ–ಕೀಯ ಬಾಂಧವ್ಯದ ಭದ್ರ ಬುನಾದಿಯ ಮೇಲೆ ಉಭಯ ದೇಶಗಳ ಕಾರ್ಯತಂತ್ರದ ಪಾಲುದಾರಿಕೆ ರೂಪುಗೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಪ್ಯಾರಿಸ್‌ನಲ್ಲಿ ಸ್ವಾಮಿನಾರಾಯಣ ದೇವಾಲಯದ ಉದ್ಘಾಟನಾ ಸಮಾರಂಭವನ್ನು ವರ್ಚುವಲ್ ಆಗಿ ಉದ್ದೇಶಿಸಿ ಮಾತನಾಡಿದ ಅವರು, ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರೊಂದಿಗೆ ಭಾರತವು ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾ–ರಿಕೆಯನ್ನು ಮತ್ತಷ್ಟು ಬಲಪಡಿಸುತ್ತಿದೆ ಎಂದರು. ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ರಕ್ಷಣೆ, ಬಾಹ್ಯಾಕಾಶ ಹಾಗೂ ಹವಾಮಾನ ಕ್ರಮ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಭಾರತ ಮತ್ತು ಫ್ರಾನ್ಸ್ ಹೊಸ ಉತ್ಸಾಹದೊಂದಿಗೆ ಮುನ್ನಡೆಯುತ್ತಿವೆ. 2026ನೇ ವರ್ಷವನ್ನು ಭಾರತ–ಫ್ರಾನ್ಸ್ ನಾವೀನ್ಯತಾ ವರ್ಷವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಭಾರತೀಯ ಸೈನಿಕರ ತ್ಯಾಗ, ಫ್ರೆಂಚ್ ವಿದ್ವಾಂಸರು ಸಂಸ್ಕೃತದ ಜನಪ್ರಿಯತೆಗೆ ನೀಡಿದ ಕೊಡುಗೆ ಹಾಗೂ ಯೋಗದ ಮೂಲಕ ಉಭಯ ದೇಶಗಳ ಜನರ ನಡುವಿನ ಬಾಂಧವ್ಯ ಮತ್ತಷ್ಟು ಗಟ್ಟಿಯಾಗಿದೆ ಎಂದು ಮೋದಿ ಹೇಳಿದರು. ಪ್ಯಾರಿಸ್‌ನಲ್ಲಿರುವ ಸ್ವಾಮಿನಾರಾಯಣ ದೇವಾಲಯವು ಭಾರತ–ಫ್ರಾನ್ಸ್ ನಡುವಿನ ಸಾಂಸ್ಕೃತಿಕ ಸಂಬಂಧಕ್ಕೆ ಹೊಸ ಆಯಾಮ ನೀಡಲಿದೆ. ದೇವಾಲಯದ ಹಲವು ಕಲ್ಲುಗಳನ್ನು ಭಾರತದಲ್ಲಿ ಕೆತ್ತಲಾಗಿದ್ದು, ಫ್ರಾನ್ಸ್‌ನ ಆಧುನಿಕ ಎಂಜಿನಿಯರಿಂಗ್ ಜತೆಗೆ ಭಾರತದ ಪ್ರಾಚೀನ ಕಲೆಗಾರಿಕೆಯನ್ನು ಸಂಯೋಜಿಸಲಾಗಿದೆ ಎಂದು ವಿವರಿಸಿದರು.

ಭಾರತದಲ್ಲಿ ತಯಾರಾಗಿ, ಫ್ರಾನ್ಸ್‌ನಲ್ಲಿ ನಿರ್ಮಾಣಗೊಂಡಿರುವ ಈ ಭವ್ಯ ದೇವಾಲಯವು ಶತಮಾನಗಳ ಕಾಲ ಉಭಯ ದೇಶಗಳ ಸಹಕಾರ ಮತ್ತು ಸ್ನೇಹದ ಸಂಕೇತವಾಗಿ ನಿಲ್ಲಲಿ ಎಂದು ಪ್ರಧಾನಿ ಆಶಿಸಿದರು. ದೇವಾಲಯವು ಕೇವಲ ಭಕ್ತಿ ಮತ್ತು ಆಧ್ಯಾತ್ಮಿಕತೆಯ ಕೇಂದ್ರವಾಗಿರದೆ, ಸಮಾಜ ಸೇವೆಯ ಕೇಂದ್ರವಾಗಿಯೂ ರೂಪುಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ ಅವರು, ಇದರ ಮೂಲಕ ಭಾರತೀಯ ಸಂಸ್ಕೃತಿ ಹಾಗೂ ಮಾನವೀಯ ಮೌಲ್ಯಗಳು ಯುರೋಪಿನಾದ್ಯಂತ ಮತ್ತಷ್ಟು ಪಸರಿಸಲಿ ಎಂದು ಆಶಿಸಿದರು.

## ತಿರುಪತಿ ದರ್ಶನ ಮುಗಿಸಿ ವಾಪಸ್ಸಾಗುತ್ತಿದ್ದ ಕಾರು ಪಲ್ಟಿ : ಒಂದೇ ಕುಟುಂಬದ ನಾಲ್ವರು ಸಾವು



ಬೆಂಗಳೂರು: ತಿರುಪತಿ ತಿಮ್ಮಪ್ಪನ ದರ್ಶನ ಮುಗಿಸಿಕೊಂಡು ಬೆಂಗಳೂರಿಗೆ ವಾಪಸ್ಸಾಗುತ್ತಿದ್ದ ಕಾರು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ಪಲ್ಟಿಯಾದ ಪರಿಣಾಮ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿರುವ ದಾರುಣ ಘಟನೆ ಕೆಜಿಎಫ್‌ನ ಬೇತಮಂಗಲ ಸಮೀಪದ ದೊಡ್ಡಕಾರಿ ಬಳಿ ಇಂದು ಬೆಳಗ್ಗೆ ಸಂಭವಿಸಿದೆ. ಮೃತರನ್ನು ಬೆಂಗಳೂರಿನ ವಿದ್ಯಾರಣ್ಯಪುರದ ನಿವಾಸಿ ಶಾರದಾಬಾಯಿ (70), ಅವರ ಪುತ್ರಿ ದೀಕ್ಷಿತಾ (20), ಅಳಿಯ ದೇವೇಂದ್ರ (45) ಹಾಗೂ ಮೊಮ್ಮಗ ವಿಷ್ಣು (12) ಎಂದು ಗುರುತಿಸಲಾಗಿದೆ.

ಬೆಂಗಳೂರು ಮತ್ತು ಮೈಸೂ–ರಿನಲ್ಲಿ ವಾಸವಾಗಿರುವ ಎರಡು ಕುಟುಂಬಗಳ ಒಟ್ಟು ಎಂಟು ಮಂದಿ ಸಂಬಂಧಿಕರು ಒಟ್ಟಾಗಿ ತಿರುಪತಿಗೆ ತೆರಳಿ ತಿಮ್ಮಪ್ಪನ ದರ್ಶನ ಪಡೆದು ಕಾರಿನಲ್ಲಿ ವಾಪಸ್ಸಾಗುತ್ತಿದ್ದರು. ಇಂದು ಬೆಳಗ್ಗೆ ಸುಮಾರು 6.50ರ ವೇಳೆಗೆ ದೊಡ್ಡಕಾರಿ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಕಾರು ಸಂಚ–ರಿಸುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾಗಿದೆ. ಅಪಘಾತದ ತೀವ್ರತೆಗೆ ಕಾರಿನಲ್ಲಿದ್ದ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದು, ಉಳಿದ ನಾಲ್ವರಿಗೆ ಗಾಯಗಳಾಗಿವೆ. ಗಾಯಾಳುಗಳನ್ನು ತಕ್ಷಣ ಬಂಗಾರಪೇಟೆಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಕುರಿತು ಮಾಹಿತಿ ತಿಳಿದ ಬೇತಮಂಗಲ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಮೃತದೇಹಗಳನ್ನು ಆಸ್ಪತ್ರೆಗೆ ರವಾನಿಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

**ಚಾಲಕನಿಗೆ ತೂಕಡಿಕೆ**

ಕಾರನ್ನು ಚಾಲನೆ ಮಾಡುತ್ತಿದ್ದ ವೇಳೆ ಚಾಲಕನಿಗೆ ತೂಕಡಿಕೆ ಬಂದಿರುವ ಸಾಧ್ಯತೆಯಿದ್ದು, ಇದರಿಂದ ನಿಯಂತ್ರಣ ತಪ್ಪಿ ಅಪಘಾತ ಸಂಭವಿಸಿರಬಹುದು ಎಂದು ಪೊಲೀಸರು ಪ್ರಾಥಮಿಕವಾಗಿ ಶಂಕಿಸಿದ್ದಾರೆ. ಘಟನೆಗೆ ನಿಖರ ಕಾರಣ ತಿಳಿಯಲು ತನಿಖೆ ಮುಂದುವರಿದಿದೆ.

Publisher and Owned by CHANDRAKANTA From Near Durgamma Temple Dyampur, Koppal District- 583232 Printed at VINAYA Printers, VINAYA Publication Word No.01 Ballary Pootwer, Bhagynagar, Koppal- 583238, Editor : CHANDRAKANTA enammadhruthinews@gmail.com